ಸಂಪುಟ : 11 ಸಂಚಿಕೆ: 105 ಪುಟ : 4+2 ಬೆಲೆ: 3.00 ಬುಧವಾರ ಮೇ 27 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 105 Pages : 4+2 Price : 3.00 Wednesday May 27 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೇ 31ರವರೆಗೆ ಧಾರ್ಮಿಕ ಜಾಗೃತಿ ಸಂಸ್ಕಾರ ಶಿಬಿರ


■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಸಮ್ಯಕ್ ಜ್ಞಾನ ಜನಧರ್ಮ ಪ್ರಭಾವನಾ ಪ್ರತಿಷ್ಠಾಪನದ ವತಿಯಿಂದ ಮೇ 25ರಿಂದ 31ರವರೆಗೆ ಬೃಹತ್ ಶ್ರಾವಕ ಸಂಸ್ಕಾರ ಶಿಬಿರ ಆಯೋಜಿಸಲಾಗಿದೆ ಎಂದು ಜೈನ್ ಸಮಾಜ ಪ್ರಕಟಣೆಯಲ್ಲಿ ತಿಳಿಸಿದೆ.

ಗ್ರಾಮದ ಭಗವಾನ್ ಶ್ರೀ 1008 ಪಾರ್ಶ್ವನಾಥ ದಿಗಂಬರ ಜಿನಮಂದಿರದಲ್ಲಿ ನಡೆಯಲಿರುವ ಶಿಬಿರವು ಸಂತ ಶಿರೋಮಣಿ ಆಚಾರ್ಯ 108 ವಿದ್ಯಾಸಾಗರ ಮಹಾರಾಜರ ಹಾಗೂ ಪರಮಪೂಜ್ಯ ಆಚಾರ್ಯ ಶ್ರೀ 108 ಅರ್ಜವಸಾಗರ ಮಹಾರಾಜರ ಪರಮ ಶಿಷ್ಯರಾದ ಚರ್ಯಾ ಶಿರೋಮಣಿ ಪ.ಪೂ. ಮುನಿ ಶ್ರೀ 108 ವಿದಿತಸಾಗರ ಮಹಾರಾಜರ ಆಶೀರ್ವಾದ ಹಾಗೂ ಮಾರ್ಗದರ್ಶನದಲ್ಲಿ ಜರುಗಲಿದೆ.

ಶಿಬಿರದಲ್ಲಿ ಧಾರ್ಮಿಕ ಉಪನ್ಯಾಸ, ಸಂಸ್ಕಾರ ಬೋಧನೆ, ಆಧ್ಯಾತ್ಮಿಕ ಚಿಂತನೆ ಹಾಗೂ ಜೈನ ಧರ್ಮದ ಮೌಲ್ಯಗಳ ಕುರಿತು ವಿಶೇಷ ಕಾರ್ಯಕ್ರಮಗಳು ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುವಂತೆ ಮನವಿ ಮಾಡಲಾಗಿದೆ.

## ಗುಲ್ಮೋಹರ್ ಹೂವಿನ ಸುರಂಗವಾಗಿ ಮಿಂಚಿದ ರಸ್ತೆ!



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಮಾರನಬಸರಿ ಗ್ರಾಮದಿಂದ ಕೊಪ್ಪದ ಕ್ರಾಸ್‌ವರೆಗೆ ಸುಮಾರು ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಬೆಳೆದು ನಿಂತಿರುವ ಗುಲ್ಮೋಹರ್ ಮರಗಳು ಇದೀಗ ಸಂಚಾರಿಗಳ ಕಣ್ಮನ ಸೆಳೆಯುತ್ತಿವೆ. ಕೆಂಪು-ಕಿತ್ತಳೆ ಬಣ್ಣದ ಹೂವುಗಳಿಂದ ಕಂಗೊಳಿಸುತ್ತಿರುವ ಈ ಮರಗಳು ರಸ್ತೆಯನ್ನೇ ನೈಸರ್ಗಿಕ ಹೂವಿನ ಸುರಂಗವನ್ನಾಗಿ ಮಾರ್ಪಡಿಸಿವೆ.

ಮುಖ್ಯ ರಸ್ತೆಯ ಎರಡೂ ಬದಿಗಳಲ್ಲಿ ದಟ್ಟವಾಗಿ ಬೆಳೆದಿರುವ ಮರಗಳು ಪ್ರಯಾಣಿಕರಿಗೆ ತಂಪಾದ ನೆರಳನ್ನು ನೀಡುತ್ತಿದ್ದು, ಬೇಸಿಗೆಯ ಬಿಸಿಲಿನ ಮಧ್ಯೆಯೂ ಮನಸಿಗೆ ಹಿತ ನೀಡುವ ವಾತಾವರಣ ಸೃಷ್ಟಿಸಿವೆ.

ಹೂವುಗಳಿಂದ ಆವೃತವಾಗಿರುವ ರಸ್ತೆಯಲ್ಲಿ ಯುವಕರು, ಪ್ರವಾಸಿಗರು ಹಾಗೂ ಸ್ಥಳೀಯರು ನಿಂತು ಸೆಲ್ಫಿ ತೆಗೆದುಕೊಳ್ಳುವುದು ಸಾಮಾನ್ಯ ದೃಶ್ಯವಾಗಿದೆ. ರಸ್ತೆಯ ಮೇಲೆ ಉದುರಿರುವ ಗುಲ್ಮೋಹರ್ ಹೂವುಗಳು ಪ್ರಕೃತಿಯ ರಂಗೋಲಿಯಂತೆಯೇ ಕಂಗೊಳಿಸುತ್ತಿದ್ದು, ಈ ಮಾರ್ಗವನ್ನು ಮತ್ತಷ್ಟು ಆಕರ್ಷಕವಾಗಿಸಿವೆ.

ಪ್ರಕೃತಿ ಪ್ರೇಮಿಗಳು ಹಾಗೂ ವಾಹನ ಸವಾರರು ಈ ರಸ್ತೆಯ ಸೌಂದರ್ಯವನ್ನು ಕಣ್ತುಂಬಿಕೊಳ್ಳುತ್ತಿದ್ದು, ಸಾಮಾಜಿಕ ಜಾಲತಾಣಗಳಲ್ಲಿಯೂ ಈ ದೃಶ್ಯಗಳು ವೈರಲ್ ಆಗುತ್ತಿವೆ.

### ಕಳಸಾಪುರ, ಬೆಟಗೇರಿ, ಕುರಹಟ್ಟಿ ಪೇಟೆಯಲ್ಲಿ ಭೂಮಿಪೂಜೆ; ಅಂಗನವಾಡಿ ಉದ್ಘಾಟನೆ, ಹಕ್ಕುಪತ್ರ ವಿತರಣೆಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ


# ರಸ್ತೆ ಅಭಿವೃದ್ಧಿಗೆ ಸಚಿವ ಎಚ್ಕೆಪಿ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತೊಂದು ದೊಡ್ಡ ಹೆಜ್ಜೆಯಾಗಿ ಕಳಸಾಪುರ ರಸ್ತೆ, ಬೆಟಗೇರಿ ಹಾಗೂ ಕುರಹಟ್ಟಿ ಪೇಟೆ ಭಾಗಗಳಲ್ಲಿ ಒಟ್ಟು ₹3 ಕೋಟಿ ವೆಚ್ಚದ ಸಿ.ಸಿ ರಸ್ತೆ ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಂಗಳವಾರ ಭೂಮಿಪೂಜೆ ನೆರವೇರಿಸಿದರು.

ನಗರದ ವಾರ್ಡ್ ಸಂಖ್ಯೆ 34 ಮತ್ತು 35ರ ಕಳಸಾಪುರ ರಸ್ತೆಯ ಇಂಡಿಯನ್ ಬ್ಯಾಂಕ್ ಸಮೀಪ, ವಾರ್ಡ್ ಸಂಖ್ಯೆ 06ರ ಬೆಟಗೇರಿ ಹಾಗೂ ವಾರ್ಡ್ ಸಂಖ್ಯೆ 10ರ ಕುರಹಟ್ಟಿ ಪೇಟೆಯಲ್ಲಿ ಕೈಗೆತ್ತಿಕೊಳ್ಳಲಾದ



ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಯಾವುದೇ ರಾಜಿ ಆಗಬಾರದು ಎಂದು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

"ಸಾರ್ವಜನಿಕರು ವರ್ಷಗಳ ಕಾಲ ಸುಗಮವಾಗಿ ಸಂಚಾರ ಮಾಡಲು ಅನುಕೂಲವಾಗುವ ರೀತಿಯಲ್ಲಿ ಕಾಮಗಾರಿ ನಡೆಯಬೇಕು. ನಾಲ್ಕು ತಿಂಗಳೊಳಗೆ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು," ಎಂದು ಸೂಚಿಸಿದರು.

> "ನಗರದ ಅಭಿವೃದ್ಧಿಗೆ ಗುಣಮಟ್ಟದ ರಸ್ತೆ ಮತ್ತು ಮೂಲಸೌಕರ್ಯಗಳೇ ಅಡಿಪಾಯ."
> – ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ

**ನಗರ ಅಭಿವೃದ್ಧಿಗೆ ಸರ್ಕಾರ ಬದ್ಧ**

ಪ್ರದೇಶದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಮುಂದಿನ ಹಂತದಲ್ಲೂ ಹೆಚ್ಚುವರಿ ಅನುದಾನ ಒದಗಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು. ರಸ್ತೆ, ಕುಡಿಯುವ ನೀರು, ಉದ್ಯಾನವನ ಹಾಗೂ ಶಿಕ್ಷಣ ಮೂಲಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದರು.

ಕಳಸಾಪುರ ಭಾಗದ ಸಾರ್ವಜನಿಕ ಉದ್ಯಾನವನ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದ ಸಚಿವರು, ಜಿಮ್ ಸಾಮಗ್ರಿ ಖರೀದಿಗೆ ₹5 ಲಕ್ಷ ಅನುದಾನ ಘೋಷಿಸಿದರು.

ಬೆಟಗೇರಿ ಹಾಗೂ ಕುರಹಟ್ಟಿ ಪೇಟೆ ಭಾಗಗಳಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ನಿರ್ಮಿಸಲಾದ ನೂತನ ಅಂಗನವಾಡಿ ಕಟ್ಟಡಗಳನ್ನು ಸಚಿವರು ಲೋಕಾರ್ಪಣೆ ಮಾಡಿದರು.

"ಅಂಗನವಾಡಿಗಳು ಕೇವಲ ಪೋಷಣಾ ಕೇಂದ್ರಗಳಲ್ಲ, ಮಕ್ಕಳ ಭವಿಷ್ಯದ ಅಡಿಪಾಯ ನಿರ್ಮಿಸುವ ಮೊದಲ ಪಾಠಶಾಲೆಗಳು," ಎಂದು ಸಚಿವರು ಹೇಳಿದರು.

▸▸3ನೇ ಪುಟಕ್ಕೆ

### ವಾರ ಕಳೆದರೂ ಬಗೆಹರಿಯದ ಸರ್ವರ್ ಸಮಸ್ಯೆ: ರೈತರು-ಮಹಿಳೆಯರ ಆಕ್ರೋಶ

# ಬಡವರ ಅನ್ನಕ್ಕೂ ಸರ್ವರ್ ಕಂಟಕ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ವ್ಯವಸಾಯ ಸೇವಾ ಸಹಕಾರಿ ಸಂಘದಲ್ಲಿ ಬಯೋಮೆಟ್ರಿಕ್ ಸರ್ವರ್ ಕೈಕೊಟ್ಟ ಪರಿಣಾಮ, ಪಡಿತರ ಪಡೆಯಲು ಫಲಾನುಭವಿಗಳು ಕಳೆದ ಹಲವು ದಿನಗಳಿಂದ ನರಕಯಾತನೆ ಅನುಭವಿಸುತ್ತಿದ್ದಾರೆ. ಹೆಬ್ಬೆಟ್ಟು ಹಾಕಲು ಸಾಧ್ಯವಾಗದೆ ನೂರಾರು ಮಂದಿ ದಿನಪೂರ್ತಿ ಸಾಲಿನಲ್ಲಿ ನಿಂತರೂ ಖಾಲಿಕೈಯಿಂದ ಮನೆಗೆ ಹಿಂತಿರುಗುತ್ತಿರುವ ದೃಶ್ಯ ಗ್ರಾಮದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಮಂಗಳವಾರ ಗ್ರಾಮಸ್ಥರು ನ್ಯಾಯಬೆಲೆ ಅಂಗಡಿ ಎದುರು ಪ್ರತಿಭಟನೆ ನಡೆಸಿ ಸರ್ಕಾರ ಹಾಗೂ ಆಡಳಿತದ ವಿರುದ್ಧ ಘೋಷಣೆ ಕೂಗಿದರು.




**ಜನರ ಪ್ರಮುಖ ಆಗ್ರಹಗಳು**

- ಸರ್ವರ್ ಸಮಸ್ಯೆ ತಕ್ಷಣ ಬಗೆಹರಿಸಬೇಕು
- ಆಫ್‌ಲೈನ್ ಮೂಲಕ ಪಡಿತರ ವಿತರಣೆ ಆರಂಭಿಸಬೇಕು
- ಹಿರಿಯ ನಾಗರಿಕರು, ಅಂಗವಿಕಲರಿಗೆ ವಿಶೇಷ ವ್ಯವಸ್ಥೆ ಕಲ್ಪಿಸಬೇಕು
- ಆಹಾರ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಪರಿಹರಿಸಬೇಕು

"ಬೇಕೇ ಬೇಕು ನ್ಯಾಯ ಬೇಕು", "ಸರ್ವರ್ ಸಮಸ್ಯೆ ನಿವಾರಿಸಿ" ಎಂದು ಕೂಗಿದ ಪ್ರತಿಭಟನಾಕಾರರು, ಸಾರ್ವಜನಿಕರಿಗೆ ಮೂಲಭೂತ ಸೇವೆ ಒದಗಿಸುವಲ್ಲಿಯೂ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

▸▸4ನೇ ಪುಟಕ್ಕೆ

### ಅರ್ಹರಿಗೆ ಗ್ಯಾರಂಟಿ ತಲುಪಲಿ-ಅಕ್ರಮಕ್ಕೆ ಬ್ರೇಕ್ ಹಾಕಿ!

## ಗ್ಯಾರಂಟಿ ಯೋಜನೆಗಳಲ್ಲಿ ಗೊಂದಲ ಬೇಡ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು. ಯಾವುದೇ ಅರ್ಹರು ಯೋಜನೆಗಳಿಂದ ವಂಚಿತರಾಗಬಾರದು ಎಂದು ತಾಲೂಕು ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಹೇಳಿದರು.




> "ಪಂಚ ಗ್ಯಾರಂಟಿ ಯೋಜನೆಗಳ ಲಾಭ ಅರ್ಹರಿಗೆ ತಲುಪಿದಾಗಲೇ ಸರ್ಕಾರದ ಉದ್ದೇಶ ಸಾರ್ಥಕವಾಗುತ್ತದೆ."
> – ನಾಗರಾಜ ಮಡಿವಾಳರ

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವವರ ವಿರುದ್ಧ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ರಾತ್ರಿ ವೇಳೆ ಲಾರಿಗಳ ಮೂಲಕ ಅಕ್ಕಿ ಸಾಗಾಟ ನಡೆಯುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಅದನ್ನು ತಡೆಗಟ್ಟುವ ಕೆಲಸ ಆಗಬೇಕು ಎಂದು ಸೂಚಿಸಿದರು.

ಯುವನಿಧಿ ಯೋಜನೆ ಕುರಿತು ನಗರ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು. ಮಳೆಗಾಲ ಹಿನ್ನೆಲೆಯಲ್ಲಿ ಹೆಸ್ಕಾಂ ಇಲಾಖೆ ವಿದ್ಯುತ್ ಅವಘಡಗಳನ್ನು ತಡೆಯಲು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಪಟ್ಟಣದ ಬಸ್ ಡಿಪೋಗೆ ಹೆಚ್ಚಿನ ಆದಾಯ ಇದ್ದರೂ ಹೊಸ ಬಸ್‌ಗಳು ಪದೇಪದೆ ಕೆಟ್ಟು ನಿಲ್ಲುತ್ತಿರುವುದನ್ನು ಸರಿಪಡಿಸಬೇಕು. ಬಸ್ ನಿಲ್ದಾಣದ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಸಾರಿಗೆ ಇಲಾಖೆಗೆ ಸೂಚಿಸಿದರು.

ನ್ಯಾಯಬೆಲೆ ಅಂಗಡಿಗಳಲ್ಲಿ ವೃದ್ಧರಿಗೆ ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಮನೆಗೆ ತಲುಪಿಸುವ ವ್ಯವಸ್ಥೆ ಮಾಡಬೇಕು. ಅಧಿಕಾರಿಗಳು ಸಾರ್ವಜನಿಕರೊಂದಿಗೆ ಜವಾಬ್ದಾರಿಯುತವಾಗಿ ವರ್ತಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಗ್ಯಾರಂಟಿ ಸಮಿತಿ ಸದಸ್ಯ ಶಿವರಾಜಗೌಡ ಪಾಟೀಲ ಮಾತನಾಡಿ, ನ್ಯಾಯಬೆಲೆ ಅಂಗಡಿಗಳ ಮೂಲಕ ಅನ್ನಭಾಗ್ಯ ಅಕ್ಕಿ ಸರಿಯಾಗಿ ವಿತರಣೆ ಆಗುವಂತೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಮನವಿ ಮಾಡಿದರು.

ಸದಸ್ಯೆ ಶಶಿಕಲಾ ಬಡಿಗೇರ ಮಾತನಾಡಿ, ನ್ಯಾಯಬೆಲೆ ಅಂಗಡಿಗಳಲ್ಲಿ ವಿತರಿಸುವ ಅಕ್ಕಿಯಲ್ಲಿ ಕಸ-ಕಡ್ಡಿ ಬರುತ್ತಿರುವ ಬಗ್ಗೆ ದೂರಿದ್ದು, ಅದನ್ನು ಸರಿಪಡಿಸಬೇಕು ಎಂದು ಒತ್ತಾಯಿಸಿದರು.

ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ವಿವಿಧ ಇಲಾಖೆಗಳ ಅಧಿಕಾರಿಗಳು ಯೋಜನೆಗಳ ಪ್ರಗತಿ ಕುರಿತು ಮಾಹಿತಿ ನೀಡಿದರು.

ತಾಲೂಕು ಪಂಚಾಯತ್ ಇಒ ಮಂಜುಳಾ ಹಕಾರಿ, ಎಡಿ ಕೃಷ್ಣಪ್ಪ ಧರ್ಮರ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸಿಡಿಪಿಒ ಮೃತ್ಯುಂಜಯ ಗುಡ್ಡದಅನ್ವೇರಿ, ಹೆಸ್ಕಾಂ ಇಲಾಖೆಯ ಆಂಜನಪ್ಪ, ಆಹಾರ ಇಲಾಖೆಯ ಜಗದೀಶ್ ಕುರುಬರ, ಸಾರಿಗೆ ಇಲಾಖೆಯ ಅಶೋಕ, ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳು, ಪಂಚ ಗ್ಯಾರಂಟಿ ಸಮಿತಿ ಸದಸ್ಯರಾದ ರಮಜಾನಸಾಬ್ ನದಾಫ, ಕಲ್ಲಪ್ಪ ಗಂಗಣ್ಣವರ, ರಮೇಶ ಬಾರಕೇರ, ಖಾದರಸಾಬ್ ರಿತ್ತಿ, ಹಸನಸಾಬ್ ಜಂಗ್ಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಕನ್ಹೇರಿ ಶ್ರೀಗಳಿಗೆ ಗದಗ ಪ್ರವೇಶ ನಿರ್ಬಂಧಿಸಿ ಶಾಂತಿ ಕಾಪಾಡಲಿ: ಬಸವರಾಜ ಸೂಳಿಬಾವಿ

## ಬಸವಾದಿ ಶರಣರ ಹೆಸರಲ್ಲಿ ಹಿಂದೂ ಸಮಾವೇಶ ಯಾಕೆ?

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾನತೆ ಮತ್ತು ಜಾತಿ ವಿರೋಧದ ತತ್ವ ಸಾರಿದ ಬಸವಾದಿ ಶರಣರ ಹೆಸರಿನಲ್ಲಿ 'ಹಿಂದೂ ಸಮಾವೇಶ' ನಡೆಸುತ್ತಿರುವುದು ಖೇದಕರವಾಗಿದ್ದು, ಮೇ 31ರಂದು ಗದಗದಲ್ಲಿ ನಡೆಯಲಿರುವ ಸಮಾವೇಶಕ್ಕೆ ಆಗಮಿಸುತ್ತಿರುವ ಕನ್ಹೇರಿ ಮಠದ ಶ್ರೀ ಕಾಡಸಿದ್ಧೇಶ್ವರ ಸ್ವಾಮೀಜಿಗಳಿಗೆ ಜಿಲ್ಲಾಡಳಿತ ಗದಗ ಪ್ರವೇಶ ನಿರ್ಬಂಧಿಸಿ ಶಾಂತಿ ಕಾಪಾಡಬೇಕು ಎಂದು ಸಾಹಿತಿ ಬಸವರಾಜ ಸೂಳಿಬಾವಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವಾದಿ ಶರಣರು ಸಮಾನತೆಗಾಗಿ ಹಿಂದುತ್ವದ ಜಾತಿ ವ್ಯವಸ್ಥೆಗೆ ವಿರುದ್ಧವಾಗಿ ಹೋರಾಡಿದವರು. ಅಂತಹ ಶರಣರ ಹೆಸರಿನಲ್ಲಿ ಹಿಂದೂ ಸಮಾವೇಶ ನಡೆಸುವುದು ಶರಣ ಚಿಂತನೆಗೆ ವಿರುದ್ಧವಾಗಿದೆ ಎಂದು ಟೀಕಿಸಿದರು.

"ಈ ಸಮಾವೇಶ ರೈತರಿಗೆ ಸಲಹೆ ನೀಡಲು




ಎಂದಾದರೆ ಅದನ್ನು 'ರೈತ ಹಿಂದೂ ಸಮಾವೇಶ' ಎಂದು ಕರೆಯಬಹುದಿತ್ತು. ಹಿಂದುತ್ವಕ್ಕೂ ಬಸವಾದಿ ಶರಣರಿಗೂ ಯಾವುದೇ ಸಂಬಂಧವಿಲ್ಲ. ಹಿಂದುತ್ವಕ್ಕೆ ಪರ್ಯಾಯವಾಗಿ ಹುಟ್ಟಿಕೊಂಡದ್ದೇ ಲಿಂಗಾಯತ ಧರ್ಮ," ಎಂದು ಹೇಳಿದರು.

ಜಾತಿ ವ್ಯವಸ್ಥೆಯನ್ನು ಒಪ್ಪದ ಶರಣ ಚಳವಳಿಯನ್ನು ಹಿಂದುತ್ವದ ಚೌಕಟ್ಟಿಗೆ ಸೇರಿಸಲು ಕೆಲವರು ವ್ಯವಸ್ಥಿತ ಪಿತೂರಿ ನಡೆಸುತ್ತಿದ್ದಾರೆ. ಈ ಸಮಾವೇಶ ಲಿಂಗಾಯತ ಧರ್ಮ ಹಾಗೂ ಸಂವಿಧಾನದ ಮೌಲ್ಯಗಳ ಮೇಲಿನ ದಾಳಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

"ನಾವೆಲ್ಲ ಹಿಂದೂ-ನಾವೆಲ್ಲ ಒಂದು" ಎಂಬ ಘೋಷಣೆ ನೀಡುವವರೊಂದಿಗೆ ಕಾಣಿಸಿಕೊಳ್ಳುತ್ತಿರುವ ಕನ್ಹೇರಿ ಮಠದ ಶ್ರೀ ಕಾಡಸಿದ್ಧೇಶ್ವರ ಸ್ವಾಮೀಜಿ ಸಮಾನತೆ ಸಾಧ್ಯವಿಲ್ಲ ಎನ್ನುವ ನಿಲುವು ವ್ಯಕ್ತಪಡಿಸುತ್ತಿದ್ದಾರೆ. ಅವರು ಮಠಾಧೀಶರಂತೆ ಅಲ್ಲ, ವಿಶ್ವ ಹಿಂದೂ ಪರಿಷತ್ ಪ್ರತಿನಿಧಿಯಂತೆ ವ'ರಾ'ತ'ನಾ'ಡ'ು'ತ್ತಿ'ದ್ದಾ'ರೆ. ಹೀಗಾಗಿ ಪೀಠ ತ್ಯಜಿಸಿ ಅದರ ಪ್ರಚಾರಕರಾಗಲಿ," ಎಂದು ಸವಾಲು ಹಾಕಿದರು.

ಬಸವ ಅನುಯಾಯಿ ಅಶೋಕ ಬರಗುಂಡಿ

**ಮೇ 31ಕ್ಕೆ ಸಾಮೂಹಿಕ ವಚನ ಪಠಣ**

ಮೇ 31ರಂದು ಬೆಳಿಗ್ಗೆ 11 ಗಂಟೆಗೆ ಗದಗದ ಗಾಂಧಿ ವೃತ್ತದಲ್ಲಿ 'ಬಸವಾದಿ ಶರಣರ ಹಿಂದೂ ಸಮಾವೇಶ' ವಿರೋಧಿಸಿ ಸಾಮೂಹಿಕ ವಚನ ಪಠಣ ಹಮ್ಮಿಕೊಳ್ಳಲಾಗಿದೆ ಎಂದು ಬಸವರಾಜ ಸೂಳಿಬಾವಿ ತಿಳಿಸಿದರು. ಮುಂದಿನ ದಿನಗಳಲ್ಲಿ ಅವಳಿ ನಗರದ ಪ್ರತಿ ವಾರ್ಡ್ ಹಾಗೂ ಹಳ್ಳಿಗಳಲ್ಲಿ ಜಾಗೃತಿ ಮೂಡಿಸಿ, ರಾಜ್ಯಮಟ್ಟದ 'ಸಮಾನತಾ ಸಮಾವೇಶ' ಆಯೋಜಿಸುವ ಚಿಂತನೆಯೂ ನಡೆದಿದೆ ಎಂದು ಬಸವರಾಜ ಸೂಳಿಬಾವಿ ಹೇಳಿದರು.

> "ಬಸವಾದಿ ಶರಣರ ತತ್ವ ಸಮಾನತೆಗಾಗಿ, ಅದನ್ನು ಹಿಂದೂತ್ವದ ರಾಜಕೀಯಕ್ಕೆ ಬಳಸುವುದು ಸರಿಯಲ್ಲ."
> – ಬಸವರಾಜ ಸೂಳಿಬಾವಿ, ಬಂಡಾಯ ಸಾಹಿತಿ

ಮಾತನಾಡಿ, ಬಸವಾದಿ ಶರಣರು ವೈದಿಕ ವ್ಯವಸ್ಥೆಯ ವಿರುದ್ಧ ಹೋರಾಡಿದವರು. ಅಂತಹ ಶರಣರ ಹೆಸರಿನಲ್ಲಿ ನಡೆಯುವ ಈ ಸಮಾವೇಶ ವಚನ ಚಳವಳಿಯ ಹಿಂದೂಕರಣದ ಪ್ರಯತ್ನವಾಗಿದೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ಶೇಖಣ್ಣ ಕವಳಿಕಾಯಿ, ಪ್ರೊ. ಡಿ.ಜಿ. ಜೋಗಣ್ಣವರ, ಗಿರಿಜಾ ಹಸಬಿ, ನಿವೃತ್ತ ಶಿಕ್ಷಕ ಡಿಎಸ್‌ಎಸ್‌ನ ಎಸ್.ಎನ್. ಬಳ್ಳಾರಿ, ಕರಿಗೌಡರ, ಪ್ರಕಾಶ ಅಸುಂಡಿ, ಲಿಂಗರಾಜ, ಡಾ. ರಾಮಚಂದ್ರ ಹಂಸನೂರ, ಶಿವನಗೌಡ ಗೌಡರ, ಕಳಸಾಪೂರಶೆಟ್ಟರ, ಗಂಗವ್ವ ಹೂಗಾರ, ಮುತ್ತು ಬಿಳೆಯಲಿ, ಶರೀಫ ಬಿಳೆಯಲಿ, ಸುಜಾತಾ ವಾರದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬಾಕಿ ಹಣ ಬಿಡುಗಡೆಗೆ ಆಗ್ರಹಿಸಿ ಅಂಗವಿಕಲರ ಒಕ್ಕೂಟ ಪ್ರತಿಭಟನೆ; ಸಿಎಂಗೆ ಮನವಿ

# ಮೂರು ತಿಂಗಳಿಂದ ಮಾಸಾಶನ ಬಂದಿಲ್ಲ..!




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಾಮಾಜಿಕ ಭದ್ರತಾ ಯೋಜನೆಯಡಿ ಅಂಗವಿಕಲರು, ಹಿರಿಯ ನಾಗರಿಕರು, ವಿಧವೆಯರು ಸೇರಿದಂತೆ ವಿವಿಧ ಫಲಾನುಭವಿಗಳಿಗೆ ಕಳೆದ ಮೂರು ತಿಂಗಳಿಂದ ಮಾಸಾಶನ ಬಿಡುಗಡೆ ಮಾಡದಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಅಂಗವಿಕಲರ ಹಾಗೂ ಪಾಲಕರ ಒಕ್ಕೂಟದ ತಾಲೂಕು ಸಮಿತಿ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆ ನಡೆಯಿತು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಅಂಗವಿಕಲರು ಹಾಗೂ ಫಲಾನುಭವಿಗಳು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಬಾಕಿ ಮಾಸಾಶನವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಬಳಿಕ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಒಕ್ಕೂಟದ ರಾಜ್ಯ ಕಾರ್ಯದರ್ಶಿ ರಂಗಪ್ಪ ದಾಸರ, ಸಾಮಾಜಿಕ ಭದ್ರತಾ ಯೋಜನೆಯಡಿ ಸರ್ಕಾರ ನೀಡುವ ಮಾಸಾಶನವೇ ಸಾವಿರಾರು ಬಡ ಕುಟುಂಬಗಳ ಬದುಕಿನ ಆಧಾರವಾಗಿದೆ ಎಂದು ಹೇಳಿದರು.

"ಅಂಗವಿಕಲರು, ಹಿರಿಯ ನಾಗರಿಕರು ಮತ್ತು ವಿಧವೆಯರಿಗೆ ಕಳೆದ ಮೂರು ತಿಂಗಳಿಂದ ಮಾಸಾಶನ ದೊರೆಯದೇ ಇರುವುದರಿಂದ ಅವರ ಜೀವನ ನಿರ್ವಹಣೆ ತುಂಬಾ ಕಷ್ಟಕರವಾಗಿದೆ" ಎಂದು ಹೇಳಿದರು.

ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿರುವ ಈ ಸಂದರ್ಭದಲ್ಲಿ ಸರ್ಕಾರ ನೀಡುವ ಮಾಸಾಶನ ಹಣ ಹೆಚ್ಚಳವಾಗದೇ ಇರುವುದರಿಂದ ಬಡ ಫಲಾನುಭವಿಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು.

ಅಂಗವಿಕಲರ ಪುನರ್ವಸತಿ ಕಾರ್ಯಕರ್ತರ ಒಕ್ಕೂಟದ ಮುಖಂಡ ಹೆಚ್. ಉಸ್ಮಾನ್ ಬಾಷ ಮಾತನಾಡಿ, ಮಾಸಾಶನ ಪಡೆಯುವ ಕುಟುಂಬಗಳಿಗೆ ಈ ಸೌಲಭ್ಯವೇ ಬದುಕಿನ ಆಸರೆಯಾಗಿದೆ ಎಂದು ಹೇಳಿದರು.

"ಪ್ರತಿ ತಿಂಗಳು ನಿಯಮಿತವಾಗಿ ಹಣ ಬಿಡುಗಡೆಯಾಗದಿದ್ದರೆ ಫಲಾನುಭವಿಗಳು ಪ್ರತಿಯೊಂದು ಅಗತ್ಯಕ್ಕೂ ಇತರರ ಮುಂದೆ ಕೈಚಾಚುವ ಪರಿಸ್ಥಿತಿ ಉಂಟಾಗುತ್ತದೆ" ಎಂದು ಆತಂಕ ವ್ಯಕ್ತಪಡಿಸಿದರು.

ಅಂಗವಿಕಲರ ಒಕ್ಕೂಟದ ತಾಲೂಕು ಅಧ್ಯಕ್ಷೆ ಬಿ. ರೇಣುಕಾ ಮಾತನಾಡಿ, ಸೌಲಭ್ಯ ರದ್ದುಗೊಂಡಿರುವ ಅರ್ಹ ಫಲಾನುಭವಿಗಳಿಗೆ ಮತ್ತೆ ಮಾಸಾಶನ ಮಂಜೂರು ಮಾಡಬೇಕು ಹಾಗೂ ಪ್ರಸ್ತುತ ನೀಡುತ್ತಿರುವ ಮಾಸಾಶನ ಮೊತ್ತವನ್ನು ಹೆಚ್ಚಳ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಮುಖಂಡರಾದ ಎನ್. ನಾಗರತ್ನ, ಡಿ. ಬಸವರಾಜ, ಚಾಂದ್ ಸಲಾಂ, ಬಿ. ಧರ್ಮಪ್ಪ, ಪಕ್ಕೀರಪ್ಪ, ಜಿ. ಸರೋಜ, ಹೆಚ್. ಚಂದ್ರಪ್ಪ, ಬಸವರಾಜ, ಕೆ. ಚಂದ್ರಪ್ಪ, ಹನುಮಂತಮ್ಮ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ರೈತರ ಮೊಗದಲ್ಲಿ ಮಂದಹಾಸ; ಜಕ್ಕಲಿಯಲ್ಲಿ ಹಳ್ಳ ಉಕ್ಕಿ ರಸ್ತೆ ಬಂದ್, ಬಸ್ ಸಂಚಾರ ಸ್ಥಗಿತ

# ಮುಂಗಾರು ಅಬ್ಬರಕ್ಕೆ ನರೇಗಲ್ಲ ತತ್ತರ!

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಪಟ್ಟಣ ಸೇರಿದಂತೆ ಹೋಬಳಿಯ ಜಕ್ಕಲಿ, ಅಬ್ಬಿಗೇರಿ, ಬೂದಿಹಾಳ, ಮಾರನಬಸರಿ, ನಿಡಗುಂದಿ, ನಿಡಗುಂದಿ ಕೊಪ್ಪ, ಹಾಳಕೆರೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಶನಿವಾರ ಸಂಜೆ ಎರಡು ತಾಸಿಗೂ ಅಧಿಕ ಕಾಲ ಸುರಿದ ಭರ್ಜರಿ ಮಳೆ ರೈತರಲ್ಲಿ ಹೊಸ ಉತ್ಸಾಹ ಮೂಡಿಸಿದೆ.

ಬೇಸಿಗೆಯ ಬಿಸಿಗೆ ಕಂಗೆಟ್ಟಿದ್ದ ಜನರು ಮಳೆಯಿಂದ ತಂಪು ಅನುಭವಿಸಿದ್ದು, ಹೊಲಗಳಲ್ಲಿ ತೇವಾಂಶ ಹೆಚ್ಚಿದ ಹಿನ್ನೆಲೆ ರೈತರು ಬಿತ್ತನೆ ಕಾರ್ಯಕ್ಕೆ ಸಜ್ಜಾಗಿದ್ದಾರೆ. ಹಲವೆಡೆ ಹೊಲಗದ್ದೆಗಳು ನೀರಿನಿಂದ ತುಂಬಿ ಕೃಷಿ ಚಟುವಟಿಕೆಗಳಿಗೆ ಚೈತನ್ಯ ತುಂಬಿದವು.

ಆದರೆ ಇದೇ ಮಳೆ ಜಕ್ಕಲಿ ಗ್ರಾಮದಲ್ಲಿ ಅವಾಂತರಕ್ಕೂ ಕಾರಣವಾಯಿತು. ಗ್ರಾಮದ ಅಗಸರ ಹಳ್ಳ ತುಂಬಿ ಹರಿದ ಪರಿಣಾಮ ಮುಳ್ಳಿನ ಕೊಂಪೆ ರಸ್ತೆ ಮಧ್ಯೆ ಬಿದ್ದು, ಜಕ್ಕಲಿ ರೋಣ ಸಂಪರ್ಕ ರಸ್ತೆ ಶನಿವಾರ ರಾತ್ರಿ ಹಾಗೂ ರವಿವಾರ ಬೆಳಿಗ್ಗೆ ಕೆಲ ಗಂಟೆಗಳ ಕಾಲ ಬಂದ್ ಆಗಿತ್ತು.



ರವಿವಾರ ಬೆಳಿಗ್ಗೆ ರೋಣದಿಂದ ಜಕ್ಕಲಿ ಕಡೆ ಬರುತ್ತಿದ್ದ ಕೆಲವು ಬಸ್‌ಗಳು ದಾರಿ ಮಧ್ಯೆ ಅಡ್ಡಿಯಾದ ಮುಳ್ಳಿನ ಕೊಂಪೆಯಿಂದ ಮುಂದೆ ಸಾಗಲು ಸಾಧ್ಯವಾಗದೆ ಹಿಂತಿರುಗಿದವು ಎಂದು ತಿಳಿದು ಬಂದಿದೆ.

ಹಳ್ಳದ ನೀರು ರಭಸವಾಗಿ ಹರಿದು ಸುತ್ತಮುತ್ತಲಿನ ಜಮೀನುಗಳಿಗೆ ನುಗ್ಗಿದ ಪರಿಣಾಮ ರೈತರು ಆತಂಕಕ್ಕೀಡಾಗಿದ್ದಾರೆ. ಕೆಲ ಹೊಲಗಳಲ್ಲಿ ನೀರು ನಿಂತು ಬೆಳೆ ಹಾನಿಯ ಭೀತಿ ಎದುರಾಗಿದೆ.

ನಂತರ ಗ್ರಾಮಸ್ಥರೇ ಸ್ವಯಂಪ್ರೇರಿತವಾಗಿ ತೆರವು ಕಾರ್ಯಾಚರಣೆ ನಡೆಸಿ ರಸ್ತೆ ಮಧ್ಯೆ ಬಿದ್ದಿದ್ದ ಮುಳ್ಳಿನ ಕೊಂಪೆಯನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

### "ವಿಂಡ್ ಪವರ್ ರಸ್ತೆಯೇ ಸಮಸ್ಯೆಗೆ ಮೂಲ"

ಅಗಸರ ಹಳ್ಳಕ್ಕೆ ವಿಂಡ್ ಪವರ್ ಕಂಪನಿ ಅಡ್ಡಲಾಗಿ ರಸ್ತೆ ನಿರ್ಮಿಸಿರುವುದರಿಂದ ನೀರಿನ ಸಹಜ ಹರಿವಿಗೆ ತೊಂದರೆಯಾಗುತ್ತಿದೆ. ರಸ್ತೆಯ ಕೆಳಭಾಗದಲ್ಲಿ ಸಣ್ಣ ಸೇತುವೆ ನಿರ್ಮಿಸಿರುವುದರಿಂದಲೇ ನೀರು ಉಕ್ಕಿ ಹರಿದು ಈ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. "ತಕ್ಷಣ ಸಮಸ್ಯೆ ಬಗೆಹರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು" ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ವಾರ್ಷಿಕೋತ್ಸವದಲ್ಲಿ ಪ್ರತಿಭಾವಂತರಿಗೆ ರಾಜ್ಯ ಪ್ರಶಸ್ತಿ

# ಸಂಸ್ಕಾರವಂತ ಮಕ್ಕಳೇ ದೇಶದ ಆಸ್ತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳಿಗೆ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ಶಿಸ್ತು ಕಲಿಸುವುದು ಅತ್ಯಂತ ಅಗತ್ಯ ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಈಶ್ವರ ದೇವಸ್ಥಾನದ ಸಭಾಭವನದಲ್ಲಿ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಆಯೋಜಿಸಿದ್ದ ಪ್ರಥಮ ವಾರ್ಷಿಕೋತ್ಸವ, "ಸ್ಮರಣೆ ಸಂಚಿಕೆ" ಬಿಡುಗಡೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

"ಮಕ್ಕಳು ಮೊಬೈಲ್ ಮತ್ತು ದುಷ್ಚಟಗಳಿಂದ ದೂರವಿದ್ದು ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಎಸ್.ಎನ್. ಬಳ್ಳಾರಿ, ಬಸವರಾಜ ಎಂ. ಕಡೆಮನಿ ಮಾತನಾಡಿ ಸಂಸ್ಥೆಯ ಸಮಾಜಮುಖಿ ಕಾರ್ಯಗಳನ್ನು ಶ್ಲಾಘಿಸಿದರು. ಸಂಸ್ಥಾಪಕ ಅಧ್ಯಕ್ಷೆ ಶೋಭಾ ಎಸ್. ಆಡಿನ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಎಸ್. ಎಸ್.ಎಲ್.ಸಿ. ಮತ್ತು ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ 40 ವಿದ್ಯಾರ್ಥಿಗಳಿಗೆ "ಕನ್ನಡ ಕುವರ-ಕನ್ನಡ ಕುವರಿ ರಾಜ್ಯ ಪ್ರಶಸ್ತಿ" ಪ್ರದಾನ ಮಾಡಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಐವರಿಗೆ "ಅನರ್ಘ್ಯ ರತ್ನ ರಾಜ್ಯ ಪ್ರಶಸ್ತಿ" ನೀಡಿ ಗೌರವಿಸಲಾಯಿತು.

ಡಿ.ಡಿ.ಪಿ.ಐ. ಆರ್.ಎಸ್. ಬುರಡಿ, ಅಶೋಕ ಮಂದಾಲಿ, ಆನಂದ ಸಿಂಗಾಡಿ, ವಿ.ವಿ. ನಡವಿನಮನಿ, ಮಲ್ಲಿಕಾರ್ಜುನ ಎಂ. ಸಂತೋಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮೇ 29ರಂದು ಮೊದಲ ದಿನವೇ ವಿದ್ಯಾರ್ಥಿಗಳ ಕೈಗೆ ಪಠ್ಯಪುಸ್ತಕ; ಮುಂಡರಗಿ ಶಿಕ್ಷಣ ಇಲಾಖೆ ಭರ್ಜರಿ ತಯಾರಿ

# ಶಾಲಾರಂಭಕ್ಕೂ ಮುನ್ನವೇ ಪುಸ್ತಕ ಸಜ್ಜು!

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

2026ರ ಹೊಸ ಶೈಕ್ಷಣಿಕ ವರ್ಷದ ಆರಂಭಕ್ಕೆ ಮುಂಡರಗಿ ತಾಲೂಕು ಹಾಗೂ ಡಂಬಳ ಹೋಬಳಿಯಲ್ಲಿ ಶಾಲಾ ಶಿಕ್ಷಣ ಇಲಾಖೆ ಭರ್ಜರಿ ಸಿದ್ಧತೆ ಕೈಗೊಂಡಿದ್ದು, ಶಾಲೆ ಆರಂಭದ ಮೊದಲ ದಿನವೇ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಿಸಲು ಸಕಲ ತಯಾರಿ ನಡೆಸಿದೆ.



ಬೇಸಿಗೆ ರಜೆ ಬಳಿಕ ಹೊಸ ಮತ್ತು ಹಳೆಯ ವಿದ್ಯಾರ್ಥಿಗಳು ಶಾಲೆಗಳತ್ತ ಮರಳುತ್ತಿರುವ ಹಿನ್ನೆಲೆಯಲ್ಲಿ ತಾಲೂಕಿಗೆ ಈಗಾಗಲೇ ಶೇ.70ರಷ್ಟು ಪಠ್ಯಪುಸ್ತಕಗಳು ತಲುಪಿದ್ದು, ಉಳಿದ ಪುಸ್ತಕಗಳೂ ಶಾಲಾರಂಭಕ್ಕೂ ಮುನ್ನವೇ ಪೂರೈಕೆಯಾಗಲಿವೆ ಎಂದು ಶಿಕ್ಷಣ ಇಲಾಖೆ ತಿಳಿಸಿದೆ.

ತಾಲೂಕಿನಲ್ಲಿ 106 ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳು ಮತ್ತು 40 ಪ್ರೌಢಶಾಲೆಗಳು ಸೇರಿ ಒಟ್ಟು 146 ಶಾಲೆಗಳಿವೆ. ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಿಗೆ ಉಚಿತವಾಗಿ ಪುಸ್ತಕ ವಿತರಣೆ ಮಾಡಲಾಗುತ್ತಿದ್ದು, ಖಾಸಗಿ ಶಾಲೆಗಳಿಗೆ ಬೇಡಿಕೆಯ ಅನುಸಾರ ಹಣ ಪಡೆದು ಪೂರೈಕೆ ಮಾಡಲಾಗುತ್ತಿದೆ.

ತಾಲೂಕಿನಲ್ಲಿ ಸುಮಾರು 26 ಸಾವಿರ ವಿದ್ಯಾರ್ಥಿಗಳಿರುವ ಅಂದಾಜಿದ್ದು, ದಾಖಲಾತಿ ಅಗತ್ಯಕ್ಕೆ ಅನುಗುಣವಾಗಿ ಪ್ರಕ್ರಿಯೆ ಇನ್ನೂ ನಡೆಯುತ್ತಿದೆ. ಪುಸ್ತಕ ಪೂರೈಕೆ ಕಾರ್ಯ ಪ್ರಗತಿಯಲ್ಲಿದ್ದು, ಈವರೆಗೆ ಶೇ.80ರಷ್ಟು ಪುಸ್ತಕಗಳು ತಲುಪಿವೆ.

ಸರಬರಾಜಾಗಿರುವ ಪುಸ್ತಕಗಳನ್ನು ಮುಂಡರಗಿಯ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ದಾಸ್ತಾನು ಇಡಲಾಗಿದ್ದು, ತಾಲೂಕು ಶಿಕ್ಷಣ ಸಂಯೋಜಕ ಮನೋಹರ ಎಸ್. ವಿವಿಧ ಶಾಲೆಗಳ ಮುಖ್ಯ ಶಿಕ್ಷಕರಿಗೆ ಪುಸ್ತಕ ಹಸ್ತಾಂತರಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ.

### ಮುಖ್ಯ ಶಿಕ್ಷಕರಿಗೆ ಹೆಚ್ಚಿದ ಹೊರೆ

ಈವರೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದಲೇ ಶಾಲೆಗಳಿಗೆ ಪುಸ್ತಕ ಪೂರೈಕೆ ಮಾಡಲಾಗುತ್ತಿತ್ತು. ಆದರೆ ಈ ಬಾರಿ ಇಲಾಖೆಯ ಆದೇಶದಂತೆ ಆಯಾ ಮುಖ್ಯ ಶಿಕ್ಷಕರೇ ಗೋದಾಮುಗಳಿಗೆ ತೆರಳಿ ಪುಸ್ತಕಗಳನ್ನು ತರಬೇಕಾಗಿದೆ. ಸಾಗಾಣಿಕೆ ವೆಚ್ಚವನ್ನು ಡಿಬಿಟಿ ಮೂಲಕ ಜಮಾ ಮಾಡುವ ವ್ಯವಸ್ಥೆ ಮಾಡಲಾಗಿದೆ.

> "ಮುಂಡರಗಿ ತಾಲೂಕಿಗೆ ಈಗಾಗಲೇ ಶೇ.70ರಷ್ಟು ಪುಸ್ತಕಗಳು ಬಂದಿವೆ. ಬಶಾಲಾರಂಭಕ್ಕೂ ಮುನ್ನ ಉಳಿದ ಪುಸ್ತಕಗಳೂ ತಲುಪಲಿದ್ದು, ಮೊದಲ ದಿನವೇ ವಿದ್ಯಾರ್ಥಿಗಳಿಗೆ ವಿತರಿಸಲಾಗುವುದು"
>
> **– ಗಂಗಾಧರ ಅಣ್ಣಿಗೇರಿ,** ಕ್ಷೇತ್ರ ಶಿಕ್ಷಣಾಧಿಕಾರಿ, ಮುಂಡರಗಿ

ಲಕ್ಕುಂಡಿಯಲ್ಲಿ ಹಳೆ ವಿದ್ಯಾರ್ಥಿಗಳಿಂದ 24 ಶಿಕ್ಷಕರಿಗೆ ಅದ್ದೂರಿ ಸನ್ಮಾನ

# ಗುರುಗಳ ಪಾದಸ್ಪರ್ಶದಲ್ಲಿ ಮೂಡಿದ ಭಾವನಾತ್ಮಕ ಕ್ಷಣಗಳು!

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಬದುಕಿನ ಭವಿಷ್ಯ ರೂಪಿಸಿದ ಗುರುಗಳನ್ನು ಸ್ಮರಿಸಿ, ಸುಮಾರು 30 ವರ್ಷಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿದ್ದ ಹಳೆ ವಿದ್ಯಾರ್ಥಿಗಳ ಭಾವನಾತ್ಮಕ ಗುರುವಂದನಾ ಕಾರ್ಯಕ್ರಮ ಪಟ್ಟಣದಲ್ಲಿ ಭಾನುವಾರ ಅದ್ದೂರಿಯಾಗಿ ಜರುಗಿತು.




1999-2000ನೇ ಸಾಲಿನ ಸರಕಾರಿ ಗಂಡು ಮಕ್ಕಳ ಪ್ರಾಥಮಿಕ ಶಾಲೆ, ಸರಕಾರಿ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆ ಹಾಗೂ ಬಿ.ಎಚ್. ಪಾಟೀಲ ಪ್ರೌಢಶಾಲೆಯ ಸುಮಾರು 85 ಹಳೆಯ ವಿದ್ಯಾರ್ಥಿಗಳು ತಮ್ಮನ್ನು ರೂಪಿಸಿದ 24 ಶಿಕ್ಷಕ-ಶಿಕ್ಷಕಿಯರನ್ನು ಶಾಲು, ಹಣ್ಣು, ಲಕ್ಕುಂಡಿಯ ಬ್ರಹ್ಮ ಜಿನಾಲಯ ಸ್ಮಾರಕ ಹಾಗೂ ಶತಮಾನ ಕಂಡ ಶಾಲೆಯ ಭಾವಚಿತ್ರವಿರುವ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

ಶ್ರೀಕೃಷ್ಣ ದೇವಸ್ಥಾನದಿಂದ ಶಾಲೆಯವರೆಗೆ ಝಾಂಜ್ ಮೇಳ, ಹೂವಿನ ಸುರಿಮಳೆ ಮತ್ತು ಜೈಘೋಷಗಳೊಂದಿಗೆ ಶಿಕ್ಷಕರನ್ನು ಮೆರವಣಿಗೆಯಲ್ಲಿ ಕರೆತರಲಾಯಿತು. ಹಳೆ ವಿದ್ಯಾರ್ಥಿಗಳು ಗುರುಗಳ ಪಾದಸ್ಪರ್ಶ ಮಾಡಿ ಭಾವುಕರಾದ ದೃಶ್ಯ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಯಿತು.

ಪುರುಷರು ಬಿಳಿ ಅಂಗಿ-ನೀಲಿ ಪ್ಯಾಂಟ್ ಹಾಗೂ ಕೇಸರಿ ಶಾಲು ಧರಿಸಿದ್ದರೆ, ಮಹಿಳೆಯರು ರೇಷ್ಮೆ ಸೀರೆಗಳಲ್ಲಿ ಭಾಗವಹಿಸಿ ಸಂಭ್ರಮಕ್ಕೆ ಮೆರಗು ತಂದರು.

ಕಾರ್ಯಕ್ರಮ ಉದ್ಘಾಟಿಸಿ ಸಾನ್ನಿಧ್ಯ ವಹಿಸಿದ್ದ ಅಲ್ಲಮಪ್ರಭುದೇವರ ಮಠದ ಸಿದ್ದಲಿಂಗೇಶ್ವರ ಶ್ರೀಗಳು, "ಗುರು ಎಂದರೆ ಬದುಕಿಗೆ ಬೆಳಕನ್ನು ನೀಡುವ ಕಾಮಧೇನು-ಕಲ್ಪವೃಕ್ಷ" ಎಂದು ಹೇಳಿದರು.

ಕಡಲಬಾಳು ಮರಿಶಾಂತವೀರ ಶ್ರೀಗಳು ಮಾತನಾಡಿ, "ಗುರುಗಳು ಮಕ್ಕಳ ಖಾಲಿ ಮನಸ್ಸಿನಲ್ಲಿ ಜ್ಞಾನ, ಸಂಸ್ಕಾರ ಮತ್ತು ಬದುಕಿನ ದಾರಿ ತುಂಬುವ ಮಹಾನ್ ಶಕ್ತಿಗಳು" ಎಂದು ಅಭಿಪ್ರಾಯಪಟ್ಟರು.

ನಿವೃತ್ತ ಶಿಕ್ಷಕ ಯು.ಎಸ್. ಬೆಂತೂರ ಮಾತನಾಡಿ, "ಗುರು-ಹಿರಿಯರನ್ನು ಗೌರವಿಸಿ, ದುಷ್ಚಟಗಳಿಂದ ದೂರವಿದ್ದಾಗ ಮಾತ್ರ ಶಿಕ್ಷಣಕ್ಕೆ ಮೌಲ್ಯ ಬರುತ್ತದೆ" ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, "ಗುರುವಂದನೆ ಮೂಲಕ ಶಿಕ್ಷಕರ ಋಣ ಸ್ಮರಿಸಿರುವುದು ಇಂದಿನ ಪೀಳಿಗೆಗೆ ಮಾದರಿ" ಎಂದು ಹೇಳಿದರು.

ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹಾಗೂ ಅಕ್ಷರದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಗ್ರಾಮಸ್ಥರು ಕೈಜೋಡಿಸಬೇಕು ಎಂದು ಕರೆ ನೀಡಿದರು.

> "ನಮ್ಮ ಭವಿಷ್ಯ ರೂಪಿಸಿದ ಶಿಕ್ಷಕರ ಋಣ ತೀರಿಸಲು ಸಾಧ್ಯವಿಲ್ಲ. ಆದರೆ ಈ ಗುರುವಂದನೆ ಮನಸಿಗೆ ತೃಪ್ತಿ ನೀಡಿದೆ."
>
> **– ಬಸವರಾಜ ಕುಕನೂರು,** ಮಾಜಿ ಯೋಧ ಹಾಗೂ ಹಳೆ ವಿದ್ಯಾರ್ಥಿ

### ಸ್ನೇಹದ ಮರುಸಂಗಮ

ಸುಮಾರು ಮೂರು ದಶಕಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿದ್ದ ಹಳೆ ವಿದ್ಯಾರ್ಥಿಗಳು ತಮ್ಮ ಕುಟುಂಬ, ಉದ್ಯೋಗ ಹಾಗೂ ಜೀವನದ ಅನುಭವಗಳನ್ನು ಹಂಚಿಕೊಂಡು ಸಂಭ್ರಮಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಅತಿಥಿಗಳಿಗೆ ವಿಶೇಷ ಭೋಜನ ವ್ಯವಸ್ಥೆ ಮಾಡಲಾಗಿದ್ದು, ಡ್ರೈ ಜಾಮೂನು, ಸೋನಪಾಪಡಿ, ಖಡಕ್ ರೊಟ್ಟಿ, ಪನ್ನೀರ್ ಗ್ರೇವಿ ಸೇರಿದಂತೆ ವಿವಿಧ ತಿನಿಸುಗಳನ್ನು ಸವಿದು ಎಲ್ಲರೂ ಸಂತಸಪಟ್ಟರು.

# ಸಮಾನತೆಯ ಬೆಳಕು ಲೋಕಾರ್ಪಣೆ



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಮಟ್ಟದ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಸಾಹಿತ್ಯ ಮತ್ತು ಸಾಮಾಜಿಕ ಚಿಂತನೆಯ ಸೊಬಗು ಮೆರೆಯಿತು.

ನ್ಯಾಯಾಂಗ ಇಲಾಖೆಯ ಸಹೋದ್ಯೋಗಿ ಶಫಿವುಲ್ಲಾ ಚಿತ್ರದುರ್ಗ ರಚಿಸಿರುವ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ ಹಾಗೂ ಸಮಾನತೆಯ ಸಂದೇಶ ಆಧಾರಿತ "ಸಮಾನತೆಯ ಬೆಳಕು" ಕೃತಿಯನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಲೋಕಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯದ 31 ಜಿಲ್ಲೆಗಳ ಜಿಲ್ಲಾಧ್ಯಕ್ಷರು ಭಾಗವಹಿಸಿ ಸಮಾರಂಭಕ್ಕೆ ವಿಶೇಷ ಮೆರುಗು ತಂದರು.

ಬಯಲ ಬೆಳಕಿನ ಕವಿ ಹಾಗೂ ನಿರಂತರ ಪ್ರಕಾಶನದ ಪ್ರಕಾಶಕ ಎ.ಎಸ್. ಮಕಾನದಾರ, ಯುವ ಕವಿ ಅಮೀರ ನಾಯಕ, ರಾಜ್ಯ ನ್ಯಾಯಾಂಗ ಇಲಾಖೆಯ ನೌಕರರ ಸಂಘದ ನಿರ್ದೇಶಕರು, ಅಖಿಲ ಕರ್ನಾಟಕ ಮಹಿಳಾ ನೌಕರರ ಸಂಘದ ಉಪಾಧ್ಯಕ್ಷೆ ಡಾ. ಎಂ. ಮಲ್ಲಿಕಾ, ರಾಜ್ಯ ಪರಿಷತ್ ಸದಸ್ಯ ಪಿ.ಜಿ. ಹರ್ಷ, ಎಸ್‌ಸಿ-ಎಸ್‌ಟಿ ನೌಕರರ ಸಂಘದ ಉಪಾಧ್ಯಕ್ಷ ಮುನಿ ಕೃಷ್ಣಪ್ಪ, ಸೌರಭ ಸಂಸ್ಕೃತಿ ಕಲಾ ಬಳಗದ ಅಧ್ಯಕ್ಷ ರಹಿಮಾನ ಕೋಳೂರ, ಕೆ.ಐ. ಸುಣಗಾರ, ಐ.ಎ. ಗಾಡಗೋಳಿ, ಆಶುಕವಿ ಹಜರತ ಅಲಿ ದಾವಣಗೆರೆ, ಡಾ. ಬಸವರಾಜ್ ಬಳ್ಳಾರಿ, ರಾಜು ಕಂಟುಗೊಣ್ಣವರ, ಮಹೇಶ್ ಹೂಬಳಿ, ಶಿವಪ್ಪ ಹದ್ಲಿ, ಎಚ್.ಎಸ್. ಬಾದನಟ್ಟಿ, ಎಂ.ಎಂ. ನಿಟ್ಟಾಲಿ, ಸುರೇಶ ಕೊಪ್ಪದ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

"ಸಮಾನತೆಯ ಬೆಳಕು" ಕೃತಿ ಡಾ. ಅಂಬೇಡ್ಕರ್ ಅವರ ಸಮಾನತೆ, ಶಿಕ್ಷಣ ಹಾಗೂ ಮಾನವೀಯ ಮೌಲ್ಯಗಳ ಚಿಂತನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮಹತ್ವದ ಪ್ರಯತ್ನವಾಗಿದೆ ಎಂದು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾಹಿತ್ಯ ಮತ್ತು ಸಾಮಾಜಿಕ ಜಾಗೃತಿಯ ಸಮ್ಮಿಲನವಾಗಿ ನಡೆದ ಕೃತಿ ಲೋಕಾರ್ಪಣೆ ಸಮಾರಂಭ ಸಭಿಕರ ಮನಗೆದ್ದಿತು.

# ರಸ್ತೆ ಅಭಿವೃದ್ಧಿಗೆ ಸಚಿವ ಎಚ್ಕೆಪಿ ಚಾಲನೆ



**▶▶ ಮೊದಲನೇ ಪುಟದಿಂದ**

ಈ ಸಂದರ್ಭದಲ್ಲಿ ವಾರ್ಡ್‌ನ 35 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲಾಯಿತು. ನೀಲವ್ವ ಪರಸಪ್ಪ ಬಜಂತ್ರಿ, ರೇಖವ್ವ ರಾಜಪ್ಪ ಬಜಂತ್ರಿ, ಅನಂತ ಬೋಜಪ್ಪ ಬಜಂತ್ರಿ, ಯಮನವ್ವ ಬಜಂತ್ರಿ, ಮಾಯವ್ವ ಬಜಂತ್ರಿ, ಗವಿಸಿದ್ದಪ್ಪ ಬಜಂತ್ರಿ ಸೇರಿದಂತೆ ಹಲವರು ಸಚಿವರಿಂದ ಹಕ್ಕುಪತ್ರ ಸ್ವೀಕರಿಸಿ ಸಂತಸ ವ್ಯಕ್ತಪಡಿಸಿದರು.

**ಗುಣಮಟ್ಟದಲ್ಲಿ ರಾಜಿ ಬೇಡ**

ಕುರಹಟ್ಟಿ ಪೇಟೆ ಕಾಮಗಾರಿಯ ವೇಳೆ ಮಾತನಾಡಿದ ಸಚಿವರು, "ರಸ್ತೆ ಕಾಮಗಾರಿಗಳು ದೀರ್ಘಕಾಲ ಬಾಳಿಕೆ ಬರುವಂತಿರಬೇಕು. ಪ್ರತಿಯೊಂದು ಹಂತದಲ್ಲೂ ಅಧಿಕಾರಿಗಳು ನಿಗಾ ವಹಿಸಬೇಕು," ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಉಷಾ ದಾಸರ, ಅನಿಲ ಗರಗ, ದುರಗೇಶ್ ವಿಭೂತಿ, ನಗರಸಭಾ ಸದಸ್ಯೆ ಲಕ್ಷ್ಮವ್ವ ಬಜಂತ್ರಿ, ನಗರಸಭಾ ಸದಸ್ಯ ಇಮ್ತಿಯಾಜ್ ಶಿರಹಟ್ಟಿ, ಜಾಂಗೀರ ಅಣ್ಣಿಗೇರಿ, ಈಶ್ವರ ಗದುಗಿನ, ಹಣಗಿ ಭಾಷಾ, ಇಬ್ರಾಹಿಂ ಶಿರಹಟ್ಟಿ, ಸೋಪೀನ್ ಅಣ್ಣಿಗೇರಿ, ಫಾರುಕ್ ಮಖಾಂದಾರ್, ಯಾಶೀನ್, ಬಸವರಾಜ ಕಡೇಮನಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ ಸೇರಿದಂತೆ ಅನೇಕ ಗಣ್ಯರು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

---

**ಕೀಟಜನ್ಯ ರೋಗ ತಡೆಗೆ ಮುನ್ನೆಚ್ಚರಿಕೆ ಕಡ್ಡಾಯ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್**

# ಡೆಂಗೀ ಡೇಂಜರ್‌ಗೆ ಜಿಲ್ಲಾಡಳಿತ ಅಲರ್ಟ್!

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಡೆಂಗೀ, ಮಲೇರಿಯಾ ಹಾಗೂ ಚಿಕೂನ್‌ಗುನ್ಯಾ ಸೇರಿದಂತೆ ಕೀಟಜನ್ಯ ರೋಗಗಳು ಹರಡದಂತೆ ಎಲ್ಲ ಇಲಾಖೆಗಳು ಸಮನ್ವಯದಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ರಾಷ್ಟ್ರೀಯ ಡೆಂಗೀ ದಿನ ಹಾಗೂ ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಸಾರ್ವಜನಿಕ ನಲ್ಲಿಗಳು, ಕೊಳವೆಬಾವಿಗಳ ಸುತ್ತ ನೀರು ನಿಲ್ಲದಂತೆ ಕ್ರಮವಹಿಸಿ, ಸೊಳ್ಳೆ



ಉತ್ಪತ್ತಿ ತಾಣಗಳಲ್ಲಿ ಸೊಳ್ಳೆ ನಾಶಕ ದ್ರಾವಣ ಸಿಂಪಡಣೆ ಮಾಡಬೇಕು ಎಂದು ಸೂಚಿಸಿದರು.

ಶಾಲೆಗಳಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಬಸ್ ಡಿಪೋಗಳಲ್ಲಿ ಖಾಲಿ ಟೈರ್ ಹಾಗೂ ಘನತ್ಯಾಜ್ಯಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಖಾಲಿ ಟೈರ್‌ಗಳ ಮೇಲೆ ಟಾರ್ಪಾಲಿನ್ ಹಾಕಿ ತಕ್ಷಣ ವಿಲೇವಾರಿಗೆ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

**ಜಿಲ್ಲೆಯಲ್ಲಿ 17 ಡೆಂಗೀ ಪ್ರಕರಣ ದೃಢ**

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾಹಿತಿ ನೀಡಿ, 2026ರ ಜನವರಿಯಿಂದ ಎಪ್ರಿಲ್‌ವರೆಗೆ 1,20,029 ರಕ್ತಲೇಪನ ಪರೀಕ್ಷೆ ನಡೆಸಲಾಗಿದ್ದು, ಎರಡು ಮಲೇರಿಯಾ ಪ್ರಕರಣಗಳು ದೃಢಪಟ್ಟಿವೆ ಎಂದರು.

ಇದೇ ಅವಧಿಯಲ್ಲಿ 607 ರಕ್ತದ ಮಾದರಿಗಳನ್ನು ಪರೀಕ್ಷಿಸಿದಾಗ 17 ಡೆಂಗೀ ಪ್ರಕರಣಗಳು ಹಾಗೂ 109 ಮಾದರಿಗಳ ಪರೀಕ್ಷೆಯಲ್ಲಿ 7 ಚಿಕೂನ್‌ಗುನ್ಯಾ ಪ್ರಕರಣಗಳು ಪತ್ತೆಯಾಗಿವೆ ಎಂದು ವಿವರಿಸಿದರು.

ಶಾಲಾ ಮಕ್ಕಳಿಗೆ ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ಡೆ-ಂಗೀ ಮತ್ತು ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವ ಬಗ್ಗೆ ತಿಳುವಳಿಕೆ ನೀಡಲಾಗುತ್ತಿದೆ ಎಂದರು.

ಸಭೆಯಲ್ಲಿ ಡೆಂಗೀ ಜ್ವರ ನಿಯಂತ್ರಣ ಮತ್ತು ಮುಂಜಾಗ್ರತಾ ಕ್ರಮಗಳ ಕುರಿತ ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು.

ಸಹಾಯಕ ಕೀಟಶಾಸ್ತ್ರಜ್ಞ ಅನ್ನಪೂರ್ಣ ಶೆಟ್ಟರ್ ಸೊಳ್ಳೆಗಳ ಜೀವನಚಕ್ರ ಹಾಗೂ ಲಾರ್ವಾಹಾರಿ ಮೀನುಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸಭೆಯ ಉದ್ದೇಶ ವಿವರಿಸಿದರು. ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಡಾ. ರಾಜೇಂದ್ರ ಬಸರಿಗಿಡದ, ಡಾ. ಅರುಂಧತಿ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ತಾಲೂಕು ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.

> "ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಪಡಿಸಿದರೆ ಮಾತ್ರ ಡೆಂಗೀ ನಿಯಂತ್ರಣ ಸಾಧ್ಯ."
> –ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

**ಡೆಂಗೀ ತಡೆಗೆ ಆರೋಗ್ಯ ಇಲಾಖೆ ಸಲಹೆಗಳು**

- ಮನೆ ಸುತ್ತ ನೀರು ನಿಲ್ಲದಂತೆ ನೋಡಿಕೊಳ್ಳಿ
- ಹಳೆಯ ಟೈರ್, ಬಾಟಲಿ, ತೆಂಗಿನ ಚಿಪ್ಪುಗಳಲ್ಲಿ ನೀರು ಸಂಗ್ರಹವಾಗದಂತೆ ಎಚ್ಚರಿಕೆ ವಹಿಸಿ
- ಜ್ವರ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ
- ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ರಕ್ತ ಪರೀಕ್ಷೆ ಹಾಗೂ ಚಿಕಿತ್ಸೆ ಲಭ್ಯ

**ಡೆಂಗೀ ಹೇಗೆ ಹರಡುತ್ತದೆ?**

ಈಡಿಸ್ ಈಜಿಪ್ಟೈ ಸೊಳ್ಳೆ ಕಚ್ಚುವಿಕೆಯಿಂದ ಡೆಂಗೀ ಹರಡುತ್ತದೆ. ಸೋಂಕಿತ ಸೊಳ್ಳೆ ಕಚ್ಚಿದ 4ರಿಂದ 8 ದಿನಗಳಲ್ಲಿ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ. ಡೆಂಗೀಗೆ ನಿರ್ದಿಷ್ಟ ಔಷಧಿ ಇಲ್ಲದ ಕಾರಣ ಆರಂಭಿಕ ಹಂತದಲ್ಲೇ ಚಿಕಿತ್ಸೆ ಪಡೆಯುವುದು ಅತ್ಯಂತ ಅಗತ್ಯವಾಗಿದೆ.

---

**ಇಂಧನ ದರ ಏರಿಕೆ, ವಿದ್ಯಾರ್ಥಿಗಳ ಸಂಕಷ್ಟಕ್ಕೆ ಮೋದಿ ಸರ್ಕಾರವೇ ಕಾರಣ : ಹುಡೇದ್ ಗುರು ಬಸವರಾಜ್**

# ಬೆಲೆ ಏರಿಕೆ–ನೀಟ್ ಹಗರಣಕ್ಕೆ ಆಕ್ರೋಶ!

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**



ಪೆಟ್ರೋಲ್–ಡೀಸೆಲ್ ದರ ಏರಿಕೆ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಜನಸಾಮಾನ್ಯರ ಸಂಕಷ್ಟದ ವಿಚಾರವಾಗಿ ವಿಜಯನಗರ ಜಿಲ್ಲಾ ಕಾಂಗ್ರೆಸ್ ವಕ್ತಾರ ಹುಡೇದ್ ಗುರು ಬಸವರಾಜ್ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ವರದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದ ಮೋದಿ ನೇತೃತ್ವದ ಸರ್ಕಾರ ಕಳೆದ ಕೆಲ ದಿನಗಳಲ್ಲಿ ನಾಲ್ಕು ಬಾರಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸಿ ಜನರ ಮೇಲಿನ ಆರ್ಥಿಕ ಹೊರೆ ಮತ್ತಷ್ಟು ಹೆಚ್ಚಿಸಿದೆ ಎಂದು ಆರೋಪಿಸಿದರು.

"ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ಸಂಕಷ್ಟದಲ್ಲಿದ್ದಾರೆ. ಇಂಧನ ದರ ಏರಿಕೆ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಬದುಕಿಗೆ ದೊಡ್ಡ ಹೊಡೆತವಾಗಿದೆ," ಎಂದು ಹೇಳಿದರು.

ದೇಶದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಹತ್ವದ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಕುಗ್ಗಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಪ್ರಕರಣದಿಂದ ಲಕ್ಷಾಂತರ ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಕೆಲ ಯುವಕರು ಆತ್ಮಹತ್ಯೆ ಮಾಡಿಕೊಂಡ ಘಟನೆಗಳು ದೇಶದ ಮನಸ್ಸನ್ನು ನೋಯಿಸುವಂತಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಒಂದೆಡೆ ದೇಶದಲ್ಲಿ ನಿರುದ್ಯೋಗ, ಬೆಲೆ ಏರಿಕೆ ಹಾಗೂ ಶಿಕ್ಷಣ ವ್ಯವಸ್ಥೆಯ ಅವ್ಯವಸ್ಥೆಯಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದರೆ, ಮತ್ತೊಂದೆಡೆ ಪ್ರಧಾನಿ ನರೇಂದ್ರ ಮೋದಿ ವಿದೇಶ ಪ್ರವಾಸಗಳಲ್ಲಿ ತೊಡಗಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಟೀಕಿಸಿದರು.

"ದೇಶಕ್ಕಾಗಿ ತ್ಯಾಗ ಮಾಡಬೇಕು ಎಂದು ಜನರಿಗೆ ಕರೆ ನೀಡುವ ಸರ್ಕಾರ ಮೊದಲು ಜನರ ನೋವು ಮತ್ತು ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಬೇಕು," ಎಂದು ಹೇಳಿದರು.

ಪೆಟ್ರೋಲ್, ಡೀಸೆಲ್ ಹಾಗೂ ದಿನನಿತ್ಯ ಬಳಕೆಯ ವಸ್ತುಗಳ ಬೆಲೆ ಏರಿಕೆಯಿಂದ ರೈತರು, ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಸಣ್ಣ ವ್ಯಾಪಾರಿಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ ತಕ್ಷಣ ಇಂಧನ ದರ ಏರಿಕೆಯನ್ನು ಹಿಂಪಡೆದು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಪಾರದರ್ಶಕ ತನಿಖೆ ನಡೆಸಬೇಕು. ಜೊತೆಗೆ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರು.

> "ಬೆಲೆ ಏರಿಕೆ ಮತ್ತು ಶಿಕ್ಷಣ ಹಗರಣಗಳಿಂದ ಜನರು ಕಂಗೆಟ್ಟಿದ್ದಾರೆ; ಕೇಂದ್ರ ಸರ್ಕಾರ ಜನರ ಧ್ವನಿಗೆ ಸ್ಪಂದಿಸಬೇಕು."
> – ಹುಡೇದ್ ಗುರು ಬಸವರಾಜ್

---

# ಅಂಬಾಭವಾನಿ ಸನ್ನಿಧಿಯಲ್ಲಿ 111 ಮುತ್ತೈದೆಯರ ಕುಂಕುಮಾರ್ಚನೆ ವೈಭವ!

**■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ**



ಮೂರು ವರ್ಷಕ್ಕೊಮ್ಮೆ ಬರುವ ಅಧಿಕ ಮಾಸದ ಪುಣ್ಯಪರ್ವದ ಅಂಗವಾಗಿ ಬೆಟಗೇರಿಯ ಐತಿಹಾಸಿಕ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಮಂಗಳವಾರ ಭಕ್ತಿ, ಪರಂಪರೆ ಮತ್ತು ಆಧ್ಯಾತ್ಮಿಕತೆಯ ವೈಭವ ಮೆರೆದಿತು. ಎಸ್‌ಎಸ್‌ಕೆ ಸಮಾಜದ ಆಶ್ರಯದಲ್ಲಿ ಆಯೋಜಿಸಲಾದ ವಿಶೇಷ ಕುಂಕುಮಾರ್ಚನೆ ಕಾರ್ಯಕ್ರಮದಲ್ಲಿ 111 ಮುತ್ತೈದೆಯರು ಭಾಗವಹಿಸಿ ದೇವಿ ಆರಾಧನೆ ನೆರವೇರಿಸಿದರು.

ಕೆಂಪು ಸೀರೆ ಧರಿಸಿದ ಮುತ್ತೈದೆಯರು ದೇವಿಯ ಸನ್ನಿಧಿಯಲ್ಲಿ ಸಾಲಾಗಿ ಕುಳಿತು ಭಕ್ತಿಭಾವದಿಂದ ಕುಂಕುಮಾರ್ಚನೆ ನೆರವೇರಿಸಿದ ದೃಶ್ಯ ದೇವಸ್ಥಾನ ಆವರಣಕ್ಕೆ ವಿಶೇಷ ಕಳೆ ತಂದಿತು. ಕೆಂಪು ಬಣ್ಣವನ್ನು ಶಕ್ತಿ, ಮಂಗಳ ಹಾಗೂ ಸೌಭಾಗ್ಯದ ಪ್ರತೀಕವೆಂದು ಪರಿಗಣಿಸಲಾಗಿದ್ದು, 111 ಸಂಖ್ಯೆಯನ್ನು ಶುಭ ಸಂಕೇತವಾಗಿ ಆಯ್ಕೆ ಮಾಡಲಾಗಿತ್ತು.

ದೇವಿಯ ಸಹಸ್ರ ಅಂಬಾಭವಾನಿ ನಾಮಾವಳಿ ಪಠಣದ ನಡುವೆ ಪ್ರತಿಯೊಂದು ನಾಮಕ್ಕೂ ಮಹಿಳೆಯರು ಕುಂಕುಮ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಿದರು. ದೇವಸ್ಥಾನದ ಆಧ್ಯಾತ್ಮಿಕ ವಾತಾವರಣ ಭಕ್ತರನ್ನು ಭಾವಪರವಶಗೊಳಿಸಿತು.

ಬೆಳಗ್ಗಿನಿಂದಲೇ ದೇವಸ್ಥಾನಕ್ಕೆ ಭಕ್ತರ ದಂಡೇ ಹರಿದುಬಂದಿದ್ದು, ನೂರಾರು ಮಂದಿ ಈ ಧಾರ್ಮಿಕ ವೈಭವಕ್ಕೆ ಸಾಕ್ಷಿಯಾದರು. ಊರಿನ ಸುಖ–ಶಾಂತಿ, ಉತ್ತಮ ಮಳೆ–ಬೆಳೆ ಹಾಗೂ ಜನರ ಸಂಕಲ್ಪ ಸಿದ್ಧಿಯಾಗಲಿ ಎಂಬ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ನೆರವೇರಿತು.

---

**ಅಕ್ರಮ ಪಡಿತರ ಅಕ್ಕಿ ದಂಧೆ ವಿರುದ್ಧ ಜಯಕರ್ನಾಟಕ ಸಂಘಟನೆ ಆಕ್ರೋಶ**

# ಬಡವರ ಅಕ್ಕಿ ಕಾಳಸಂತೆಗೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನಲ್ಲಿ ಪಡಿತರ ಅಕ್ಕಿಯ ಅಕ್ರಮ ಮಾರಾಟ ಮತ್ತು ಸಾಗಾಟ ಜಾಲ ದೊಡ್ಡ ಮಟ್ಟದಲ್ಲಿ ನಡೆಯುತ್ತಿದ್ದು, ದಂಧೆಕೋರರ ವಿರುದ್ಧ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಯಕರ್ನಾಟಕ ಸಂಘಟನೆಯವರು ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ ಅವರಿಗೆ ಸೋಮವಾರ ಮನವಿ ಸಲ್ಲಿಸಿದರು.



ಈ ವೇಳೆ ಸಂಘಟನೆಯ ತಾಲೂಕು ಅಧ್ಯಕ್ಷ ಇಸ್ಮಾಯಿಲ್ ಆಡೂರ ಹಾಗೂ ಮುಖಂಡ ರಮೇಶ ಹಂಗನಕಟ್ಟಿ ಮಾತನಾಡಿ, "ಬಡಜನರ ಹಸಿವು ನೀಗಿಸಲು ಸರ್ಕಾರ ಉಚಿತವಾಗಿ ನೀಡುವ ಪಡಿತರ ಅಕ್ಕಿಯನ್ನು ಕೆಲ ದಂಧೆ–ಕೋರರು ಮನೆಮನೆಗೆ ತೆರಳಿ ಕೆಜಿಗೆ ₹12ರಿಂದ ₹15ಕ್ಕೆ ಖರೀದಿಸಿ, ಬಳಿಕ ಹೆಚ್ಚಿನ ದರಕ್ಕೆ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.

ಅಕ್ರಮವಾಗಿ ಸಂಗ್ರಹಿಸಲಾಗುವ ಅಕ್ಕಿಯನ್ನು ಲಾರಿಗಳ ಮೂಲಕ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳಿಗೆ ಸಾಗಾಟ ಮಾಡಲಾಗುತ್ತಿದೆ. ಹಲವು ವರ್ಷಗಳಿಂದ ಈ ಜಾಲ ನಡೆಯುತ್ತಿದ್ದರೂ ಆಹಾರ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಪರಿಣಾಮಕಾರಿ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಕ್ರಮ ಅಕ್ಕಿ ಖರೀದಿ, ಸಂಗ್ರಹ ಹಾಗೂ ಸಾಗಾಟದಲ್ಲಿ ತೊಡಗಿರುವವರನ್ನು ಬಂಧಿಸಿ ಕಾನೂನು ಕ್ರಮ ಜರುಗಿಸಬೇಕು. ಸಂಬಂಧಪಟ್ಟ ಅಧಿಕಾರಿಗಳ ಪಾತ್ರದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಲಕ್ಷ್ಮೇಶ್ವರ ತಾಲೂಕಿನಲ್ಲಿ ಚೆಕ್‌ಪೋಸ್ಟ್ ಹಾಗೂ ವಿಶೇಷ ನಿಗಾ ಘಟಕ ಸ್ಥಾಪಿಸಿ, ಬಡವರ ಪಾಲಿನ ಪಡಿತರ ಅಕ್ಕಿ ಕಾಳಸಂತೆಗೆ ಹೋಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಇಸಾಕಭಾಷಾ ಹರಪನಹಳ್ಳಿ, ಸದಾನಂದ ನಂದೆಣ್ಣವರ, ಶರಣಪ್ಪ ಬಸಾಪುರ, ಪೀರಸಾಬ್ ರಿತ್ತಿ, ಮೈನು ಮೊಮೀನ್, ತನ್ವೀರ್ ರಿತ್ತಿ, ಕರೀಂಸಾಬ್ ಶಿರಹಟ್ಟಿ, ಸಿದ್ದಲಿಂಗೇಶ ಮರಳಿಹಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

---

**'ಕುಲಕ್ಕೆ ತಿಲಕ' ಸಾಂಸ್ಕೃತಿಕ ಬಳಗದಿಂದ ನಿವೃತ್ತ ಸೈನಿಕರ ಸನ್ಮಾನ – ದೇಶಸೇವೆಗೆ ಕೃತಜ್ಞತೆಯ ನಮನ**

# ವೀರಯೋಧರಿಗೆ ಗೌರವದ ಸಲಾಂ

**■ ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಗಡಿ ಭಾಗಗಳಲ್ಲಿ ಜೀವ ಪಣಕ್ಕಿಟ್ಟು ರಾಷ್ಟ್ರ ರಕ್ಷಣೆಯಲ್ಲಿ ತೊಡಗಿರುವ ಸೈನಿಕರ ಸೇವೆ ಸ್ಮರಣೀಯವಾಗಿದ್ದು, ಅವರನ್ನು ಗೌರವಿಸುವುದು ಪ್ರತಿಯೊಬ್ಬರ ರಾಷ್ಟ್ರೀಯ ಕರ್ತವ್ಯ ಎಂದು ತಳಬಾಳು ಸರ್ಕಾರಿ ವಸತಿಯುತ ಮಾದರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಈರಣ್ಣ ಆರ್. ಲಗಳೂರು ಹೇಳಿದರು.



ನಗರದಲ್ಲಿ ಕುಲಕ್ಕೆ ತಿಲಕ ಸಾಂಸ್ಕೃತಿಕ ಬಳಗ ವತಿಯಿಂದ ಭಾರತೀಯ ಸೇನೆಯಲ್ಲಿ ಅಮೋಘ ಸೇವೆ ಸಲ್ಲಿಸಿ ನಿವೃತ್ತರಾದ ಹನುಮಂತಪ್ಪ ಬುರಡಿ ಹಾಗೂ ಭೀಮಪ್ಪ ದೊಡ್ಡಮನಿ ಅವರಿಗೆ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ದೇಶದ ನೆಲ, ಜಲ ಹಾಗೂ ಜನರ ರಕ್ಷಣೆಗೆ ಸೈನಿಕರು ಹಗಲಿರುಳು ತ್ಯಾಗಭಾವದಿಂದ ಸೇವೆ ಸಲ್ಲಿಸುತ್ತಿದ್ದು, ಅವರ ಅನುಪಮ ಸೇವೆಯ ಫಲವಾಗಿಯೇ ನಾಗರಿಕರು ನೆಮ್ಮದಿಯ ಬದುಕು ನಡೆಸಲು ಸಾಧ್ಯವಾಗಿದೆ ಎಂದು ಹೇಳಿದರು.

ಗಜೇಂದ್ರಗಡದ ಎಸ್.ಎಂ. ಭೂಮರೆಡ್ಡಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಜಿ.ಬಿ. ಗುಡಿಮನಿ ಮಾತನಾಡಿ, ಸೈನಿಕರ ಸೇವೆ ಅತ್ಯಂತ ಸವಾಲಿನದ್ದಾಗಿದ್ದು, ಜಮ್ಮು–ಕಾಶ್ಮೀರ, ಅರುಣಾಚಲ ಪ್ರದೇಶ, ಈಶಾನ್ಯ ಭಾರತ, ಪಂಜಾಬ್ ಹಾಗೂ ರಾಜಸ್ಥಾನದ ಮರುಭೂಮಿ ಸೇರಿದಂತೆ ಕಠಿಣ ಪರಿಸ್ಥಿತಿಗಳಲ್ಲಿಯೂ ಭಾರತೀಯ ಯೋಧರು ದೇಶ ರಕ್ಷಣೆಯಲ್ಲಿ ನಿರಂತರ ತೊಡಗಿದ್ದಾರೆ ಎಂದು ಹೇಳಿದರು. ಇಂತಹ ವೀರಯೋಧರನ್ನು ದೇಶಕ್ಕೆ ನೀಡಿದ ಪೋಷಕರು ನಿಜಕ್ಕೂ ಧನ್ಯರು ಎಂದು ಅಭಿಪ್ರಾಯಪಟ್ಟರು.

ಗಜೇಂದ್ರಗಡದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಬಸವರಾಜ ಜೋಗಣ್ಣವರ ಮಾತನಾಡಿ, ಹನುಮಂತಪ್ಪ ಬುರಡಿ ಹಾಗೂ ಭೀಮಪ್ಪ ದೊಡ್ಡಮನಿ ಅವರು ವಿದ್ಯಾರ್ಥಿ ದಶೆಯಲ್ಲಿಯೇ ಸೈನಿಕರಾಗುವ ಕನಸು ಕಂಡು, ಅದನ್ನು ಸಾಧನೆಗೈದು ದೇಶ ಸೇವೆಯಲ್ಲಿ ಸಾರ್ಥಕ ಬದುಕು ಕಟ್ಟಿಕೊಂಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಗ್ರಾಮೀಣ ಹಾಗೂ ಬಡತನದ ಹಿನ್ನೆಲೆಯಿಂದ ಬಂದಿದ್ದರೂ ದೇಶ ಸೇವೆಯ ಸಂಕಲ್ಪದಿಂದ ಮುಂದೆ ಬಂದ ಇವರ ಸಾಧನೆ ಯುವಕರಿಗೆ ಮಾದರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ, ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಸುಣಗಾರ ಹೆಚ್.ಎಸ್. ಮಂಗಳೂರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

> "ದೇಶದ ಗಡಿಯಲ್ಲಿ ಸೈನಿಕರು ತೋರಿಸುವ ತ್ಯಾಗ ಮತ್ತು ಶೌರ್ಯವೇ ನಮ್ಮ ಸುರಕ್ಷಿತ ಬದುಕಿನ ನಿಜವಾದ ಬಲ."
> – ಡಾ. ಈರಣ್ಣ ಆರ್. ಲಗಳೂರು

---

**ಐಕಾನ ಶಿಕ್ಷಣ ಸಂಸ್ಥೆಯ ಸಮಾರೋಪ ಸಮಾರಂಭದಲ್ಲಿ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ**

# ಬೇಸಿಗೆ ಶಿಬಿರದಿಂದ ಮಕ್ಕಳ ಪ್ರತಿಭೆಗೆ ಹೊಸ ಚೈತನ್ಯ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಕ್ಕಳ ಭಾವಿ ಭವಿಷ್ಯ ರೂಪಿಸುವಲ್ಲಿ ಬೇಸಿಗೆ ಶಿಬಿರಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಶಿಕ್ಷಕಿ ಶೋಭಾ ಪಾಟೀಲ ಹೇಳಿದರು.



ಪಟ್ಟಣದ ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆಯಲ್ಲಿ ಐಕಾನ ಶಿಕ್ಷಣ ಸಂಸ್ಥೆ ಆಯೋಜಿಸಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಅಗತ್ಯವಾಗಿದ್ದು, ಬೇಸಿಗೆ ರಜೆಯನ್ನು ಸದುಪಯೋಗಪಡಿಸಿಕೊಳ್ಳುವ ನಿಟ್ಟಿನಲ್ಲಿ ಇಂತಹ ಶಿಬಿರಗಳು ಮಕ್ಕಳ ಪ್ರತಿಭೆ ಮತ್ತು ಆತ್ಮವಿಶ್ವಾಸ ಬೆಳೆಸಲು ನೆರವಾಗುತ್ತವೆ ಎಂದು ತಿಳಿಸಿದರು. ಗ್ರಾಮೀಣ ಮಕ್ಕಳಿಗೆ ದಾರಿದೀಪವಾಗಿರುವ ಐಕಾನ ಶಿಕ್ಷಣ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಐಕಾನ ಸಂಸ್ಥೆಯ ಸಂಸ್ಥಾಪಕ ನಾಗರಾಜ ಬಂಡಿ ಮಾತನಾಡಿ, ಶಿಬಿರದಲ್ಲಿ ಕೇವಲ ಓದು–ಬರಹಕ್ಕಷ್ಟೇ ಸೀಮಿತವಾಗದೆ ಕ್ರೀಡೆ, ಚಿತ್ರಕಲೆ, ಸಂಗೀತ, ಸಾಹಿತ್ಯ ಸೇರಿದಂತೆ ವಿವಿಧ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಸೃಜನಶೀಲತೆ ಬೆಳೆಸುವ ಪ್ರಯತ್ನ ಮಾಡಲಾಗಿದೆ ಎಂದರು. ಮುಂದಿನ ದಿನಗಳಲ್ಲಿ ಎಐ ತಂತ್ರಜ್ಞಾನ ಕುರಿತ ತರಬೇತಿಯನ್ನೂ ಮಕ್ಕಳಿಗೆ ಪರಿಚಯಿಸುವ ಯೋಜನೆ ಇದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಶೋಭಾ ಪಾಟೀಲ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳು ಹಾಗೂ ಶಿಬಿರದಲ್ಲಿ ಸಾಧನೆ ಮಾಡಿದ ಮಕ್ಕಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿ.ಎ. ವಂಟಕರ ವಹಿಸಿದ್ದರು. ಹೊನ್ನಪ್ಪ ನೀಲಗುಂದ, ರಾಜೇಶ್ವರಿ ಬಡ್ನಿ, ಚಂದ್ರಶೇಖರ ಭಜಂತ್ರಿ, ವಿ.ಡಿ. ಸಿದ್ದನಗೌಡ್ರ, ಜ್ಯೋತಿ ನೀಲಗುಂದ, ಉಮಾ ಬ್ಯಾಳಿ, ಸುಮಾ ಪಾಟೀಲ ಹಾಗೂ ಶಿವಲಿಂಗಪ್ಪ ಕೊಂಡಿಕೊಪ್ಪ ಉಪಸ್ಥಿತರಿದ್ದರು.

> "ಬೇಸಿಗೆ ರಜೆಯನ್ನು ಸದುಪಯೋಗಪಡಿಸಿಕೊಂಡ ಮಕ್ಕಳು ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬಹುದು."
> – ಶೋಭಾ ಪಾಟೀಲ, ಶಿಕ್ಷಕಿ

## ಬಡವರ ಅನ್ನಕ್ಕೂ ಸರ್ವರ್ ಕಂಟಕ!

▸▸ ಮೊದಲನೇ ಪುಟದಿಂದ

ಮಳೆಗಾಲದ ಕೃಷಿ ಚಟುವಟಿಕೆ ಆರಂಭವಾಗಿರುವ ವೇಳೆಯಲ್ಲೇ ರೈತರು ಹೊಲದ ಕೆಲಸ ಬಿಟ್ಟು ನ್ಯಾಯಬೆಲೆ ಅಂಗಡಿ ಮುಂದೆ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ಎದುರಾಗಿದೆ.

"ಬೆಳಗ್ಗೆಯಿಂದ ಸಂಜೆವರೆಗೆ ಕಾಯಿಸುತ್ತಾರೆ. ಕೊನೆಗೆ 'ಸರ್ವರ್ ಇಲ್ಲ' ಎಂದು ಮನೆಗೆ ಕಳುಹಿಸುತ್ತಾರೆ. ಎರಡು-ಮೂರು ದಿನಗಳಿಂದ ಬರುತ್ತಿದ್ದರೂ ಪಡಿತರ ಸಿಗುತ್ತಿಲ್ಲ," ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

"ಒಂದೆಡೆ ಕೃಷಿ ಕೆಲಸ, ಮತ್ತೊಂದೆಡೆ ಪಡಿತರದ ಕಷ್ಟ. ಕೆಲಸವೂ ಆಗುತ್ತಿಲ್ಲ, ಪಡೀತರವೂ ಸಿಗುತ್ತಿಲ್ಲ," ಎಂದು ಅಸಮಾಧಾನ ಹೊರಹಾಕಿದರು. ಮಹಿಳೆಯರು ಮಾತನಾಡಿ, "ಮನೆಯ ಕೆಲಸ, ಮಕ್ಕಳ ಜವಾಬ್ದಾರಿ ಬಿಟ್ಟು ಬರುತ್ತಿದ್ದೇವೆ. ದಿನವಿಡೀ ಕಾಯಿಸಿದರೂ ಪಡಿತರ ಸಿಗುತ್ತಿಲ್ಲ. ಬಡವರ ಸಂಕಷ್ಟ ಸರ್ಕಾರಕ್ಕೆ ಕಾಣುತ್ತಿಲ್ಲ," ಎಂದು ಬೇಸರ ವ್ಯಕ್ತಪಡಿಸಿದರು.

ಹಿರಿಯ ನಾಗರಿಕರು ಹಾಗೂ ಅಂಗವಿಕಲರು ಬಿಸಿಲಿನಲ್ಲಿ ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲ ವೃದ್ಧರು, "ಬೆರಳಚ್ಚೇ ಸರಿಯಾಗಿ ಬರುತ್ತಿಲ್ಲ. ಅದರ ಮೇಲೆ ಸರ್ವರ್ ಸಮಸ್ಯೆ. ಪ್ರತಿದಿನ ಬಂದು ಹಿಂತಿರುಗುವುದು ತುಂಬಾ ಕಷ್ಟ," ಎಂದು ಅಳಲು ತೋಡಿಕೊಂಡರು. ಅಂಗವಿಕಲರು ಮತ್ತು ವೃದ್ಧ ಮಹಿಳೆಯರು ನೆಲದ ಮೇಲೆಯೇ ಕುಳಿತು ಕಾಯುತ್ತಿರುವ ದೃಶ್ಯ ಜನರ ಮನಕಲುಕಿತು.

"ಸರ್ವರ್ ಸಮಸ್ಯೆ ಇದೆ ಎಂದು ಹೇಳುವುದನ್ನು ಬಿಟ್ಟರೆ ಬೇರೆ ಯಾವುದೇ ಸ್ಪಂದನೆ ಇಲ್ಲ. ಅಧಿಕಾರಿಗಳು ಸ್ಥಳಕ್ಕೆ ಬಂದು ಸಮಸ್ಯೆ ಕೇಳುವವರೇ ಇಲ್ಲ," ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ತಕ್ಷಣ ಆಫ್‌ಲೈನ್ ಮೂಲಕವಾದರೂ ಪಡಿತರ ವಿತರಣೆ ಮಾಡಬೇಕು. ಇಲ್ಲವಾದರೆ ತಾಲೂಕು ಮಟ್ಟದಲ್ಲಿ ಹೋರಾಟ ತೀವ್ರಗೊಳಿಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

## ಅಮೃತ ವೈನ್ ಮದ್ಯದ ಅಕ್ರಮ ಸೇಲ್‌ಗೆ ಬ್ರೇಕ್

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಮಂಜುನಾಥ ನಗರ ಕಣವಿ ಪ್ಲಾಟ್‌ನಲ್ಲಿ ಸಾರ್ವಜನಿಕ ರಸ್ತೆಯಲ್ಲೇ ಅಕ್ರಮ ಮದ್ಯ ಮಾರಾಟಕ್ಕೆ ಸಿದ್ಧತೆ ನಡೆಸಿದ್ದ ಆರೋಪದ ಹಿನ್ನೆಲೆಯಲ್ಲಿ ಬೆಟಗೇರಿ ಪೊಲೀಸರು ದಾಳಿ ನಡೆಸಿ

ಶ್ರೀಕಾಂತ್ ಯಲ್ಲೋಸಾ ಪವಾರ್ (48) ಎಂಬಾತನ ವಶದಲ್ಲಿದ್ದ ₹1240 ಮೌಲ್ಯದ ಡಿ.ಕೆ. ಡಬಲ್ ಕಿಕ್ ನೀಟ್ ವಿಸ್ಕಿಯ 90 ಎಂ.ಎಲ್. ಗಾತ್ರದ 31 ಟೆಟ್ರಾ ಪ್ಯಾಕೆಟ್, ಖಾಲಿ ಪ್ಯಾಕೆಟ್ ಹಾಗೂ ಎರಡು ಪ್ಲಾಸ್ಟಿಕ್ ಗ್ಲಾಸ್‌ಗಳನ್ನು ಜಪ್ತಿ ಮಾಡಿದ್ದಾರೆ. ಮೃತ ವೈನ್ ಶಾಪ್‌ನಿಂದ ಮದ್ಯ ತಂದು ಮಾರಾಟ ಮಾಡುತ್ತಿದ್ದ ಆರೋಪ ಕೇಳಿ ಬಂದಿದ್ದು, ಕರ್ನಾಟಕ ಅಬಕಾರಿ ಕಾಯ್ದೆ-1965ರ ಕಲಂ 32(3) ಅಡಿಯಲ್ಲಿ ಕ್ರೈಂ ನಂ.45/2026 ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

### ಮೂರು ವರ್ಷಗಳಲ್ಲಿ ಗ್ಯಾರಂಟಿ-ಅಭಿವೃದ್ಧಿ ಮೂಲಕ ರಾಜ್ಯಕ್ಕೆ ಹೊಸ ದಿಕ್ಕು : ಅಶೋಕ ಮಂದಾಲಿ

# ಕರ್ನಾಟಕ ಮಾದರಿ ದೇಶಕ್ಕೆ ಮಾದರಿ!

■ ವಿಜಯಸಾಕ್ಷಿ ಸುದ್ದಿ, ಗದಗ

ಜನಪರ ಗ್ಯಾರಂಟಿ ಯೋಜನೆಗಳು, ಕೈಗಾರಿಕಾ ಕ್ರಾಂತಿ, ಉದ್ಯೋಗ ಸೃಷ್ಟಿ ಹಾಗೂ ಸಾಮಾಜಿಕ ಭದ್ರತಾ ಕಾರ್ಯಕ್ರಮಗಳ ಮೂಲಕ ಕಾಂಗ್ರೆಸ್ ಸರ್ಕಾರ ಮೂರು ವರ್ಷದ ಆಡಳಿತದಲ್ಲಿ ಕರ್ನಾಟಕವನ್ನು ದೇಶದ ಮಾದರಿ ರಾಜ್ಯವನ್ನಾಗಿ ರೂಪಿಸಿದೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದ ಜಿಎಸ್‌ಡಿಪಿ ಬೆಳವಣಿಗೆಯಲ್ಲಿ ಕರ್ನಾಟಕ ಶೇ. 10.2ರೊಂದಿಗೆ ದೇಶದಲ್ಲೇ ಮೊದಲ ಸ್ಥಾನದಲ್ಲಿದ್ದು, ತೆರಿಗೆ ಸಂಗ್ರಹ ಹಾಗೂ ವಿದೇಶಿ ಬಂಡವಾಳ ಹೂಡಿಕೆಯಲ್ಲಿ



ಎರಡನೇ ಸ್ಥಾನ ಪಡೆದಿದೆ ಎಂದು ತಿಳಿಸಿದ್ದಾರೆ.

**"1.31 ಲಕ್ಷ ಕೋಟಿ ನೇರವಾಗಿ ಜನರ ಖಾತೆಗೆ"**

ಗ್ಯಾರಂಟಿ ಯೋಜನೆಗಳ ಮೂಲಕ 1.31 ಲಕ್ಷ ಕೋಟಿ ರೂ.ಗಿಂತ ಹೆಚ್ಚು ಮೊತ್ತವನ್ನು ನೇರವಾಗಿ ಜನರಿಗೆ ತಲುಪಿಸಲಾಗಿದೆ. ಗೃಹಜ್ಯೋತಿ, ಗೃಹಲಕ್ಷ್ಮೀ, ಶಕ್ತಿ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆಗಳಿಂದ ಸುಮಾರು 4.5 ಕೋಟಿ ಕನ್ನಡಿಗರ ಬದುಕಿಗೆ ಆರ್ಥಿಕ ಬಲ ಸಿಕ್ಕಿದೆ ಎಂದು ಹೇಳಿದರು.

ಗೃಹಲಕ್ಷ್ಮೀ ಯೋಜನೆಗೆ 74,180 ಕೋಟಿ ರೂ., ಗೃಹಜ್ಯೋತಿಗೆ 28,657 ಕೋಟಿ ರೂ., ಶಕ್ತಿ ಯೋಜನೆಗೆ 18,625 ಕೋಟಿ ರೂ., ಅನ್ನಭಾಗ್ಯಕ್ಕೆ 20,211 ಕೋಟಿ ರೂ. ಹಾಗೂ ಯುವನಿಧಿಗೆ 950 ಕೋಟಿ ರೂ. ಅನುದಾನ ನೀಡಲಾಗಿದೆ ಎಂದು ವಿವರಿಸಿದರು.

> "ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕುಸಿಯುತ್ತದೆ ಎಂದವರಿಗೆ ಕರ್ನಾಟಕದ ಸಾಧನೆಗಳೇ ಉತ್ತರವಾಗಿವೆ."
> – ಅಶೋಕ ಮಂದಾಲಿ, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ

**ಕೈಗಾರಿಕೆ-ಉದ್ಯೋಗದಲ್ಲಿ ದಾಖಲೆ**

ಕಾಂಗ್ರೆಸ್ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ 117 ಕೈಗಾರಿಕಾ ಒಪ್ಪಂದಗಳ ಮೂಲಕ 6.70 ಲಕ್ಷ ಕೋಟಿ ರೂ. ಹೂಡಿಕೆ ಆಕರ್ಷಿಸಿ, 2.47 ಲಕ್ಷ ನೇರ ಉದ್ಯೋಗ ಸೃಷ್ಟಿಸಿದೆ.

ಇನ್ವೆಸ್ಟ್ ಕರ್ನಾಟಕ-2025 ಕಾರ್ಯಕ್ರಮದಲ್ಲಿ 10.27 ಲಕ್ಷ ಕೋಟಿ ರೂ. ಹೂಡಿಕೆ ಘೋಷಣೆಯಾಗಿದ್ದು, 6 ಲಕ್ಷ ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ ಎಂದು ತಿಳಿಸಿದರು.

ಉತ್ತರ ಕರ್ನಾಟಕ ಸೇರಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕಾ ಕ್ಲಸ್ಟರ್‌ಗಳು, ಸೆಮಿಕಂಡಕ್ಟರ್ ಪಾರ್ಕ್, ಜವಳಿ ಪಾರ್ಕ್, ಎಲೆಕ್ಟ್ರಿಕ್ ವಾಹನ ಕ್ಲಸ್ಟರ್ ಹಾಗೂ ಜಿಸಿಸಿ ಕೇಂದ್ರಗಳ ಸ್ಥಾಪನೆಯಿಂದ ರಾಜ್ಯದ ಆರ್ಥಿಕತೆ ಮತ್ತಷ್ಟು ಬಲಗೊಳ್ಳಲಿದೆ ಎಂದರು.

**ರೈತರು, ಕಾರ್ಮಿಕರು, ಮಹಿಳೆಯರಿಗೆ ವಿಶೇಷ ಯೋಜನೆ**

ರೈತರಿಗೆ ಬೆಳೆ ಪರಿಹಾರ, ಹನಿ-ತುಂತುರು ನೀರಾವರಿ, ಕೃಷಿ ಹೊಂಡ, ಆಹಾರ ಸಂಸ್ಕರಣಾ ಘಟಕ, ತೋಟಗಾರಿಕಾ ಕಿಸಾನ್ ಮಾಲ್ ಯೋಜನೆಗಳಿಂದ ನೆರವು ನೀಡಲಾಗಿದೆ.

ಒಂದೇ ಬಾರಿ 20 ಸಾವಿರ ಪೌರಕಾರ್ಮಿಕರನ್ನು ಕಾಯಂಗೊಳಿಸಿ ಮಾಸಿಕ ವೇತನ ಸೌಲಭ್ಯ ಕಲ್ಪಿಸಲಾಗಿದೆ.

ಮಹಿಳಾ ಸಬಲೀಕರಣಕ್ಕಾಗಿ 30 ಸಾವಿರ ಮಹಿಳೆಯರಿಗೆ ಉದ್ಯೋಗಾಧಾರಿತ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದರು.

**ಆರೋಗ್ಯ-ಶಿಕ್ಷಣದಲ್ಲಿ ಹೊಸ ಹೆಜ್ಜೆ**

ಆರೋಗ್ಯ ಕ್ಷೇತ್ರಕ್ಕೆ 17,473 ಕೋಟಿ ರೂ. ಮೀಸಲಿಟ್ಟು ಗೃಹ ಆರೋಗ್ಯ ಯೋಜನೆಯಡಿ ಮನೆ ಮನೆಗೆ ಆರೋಗ್ಯ ತಪಾಸಣೆ ಆರಂಭಿಸಲಾಗಿದೆ.

ಶಿಕ್ಷಣ ಕ್ಷೇತ್ರದಲ್ಲಿ 51 ಸಾವಿರ ಅತಿಥಿ ಶಿಕ್ಷಕರ ನೇಮಕ, 26 ಸರ್ಕಾರಿ ಮಹಿಳಾ ಕಾಲೇಜುಗಳ ಅಭಿವೃದ್ಧಿ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಶೇಷ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದರು.

**ಉತ್ತರ ಕರ್ನಾಟಕಕ್ಕೂ ಭರಪೂರ ಯೋಜನೆ**

ಉತ್ತರ ಕರ್ನಾಟಕ ಅಭಿವೃದ್ಧಿಗೆ ಸಾವಿರಾರು ಕೋಟಿ ರೂ. ಮೌಲ್ಯದ ನೀರಾವರಿ, ರಸ್ತೆ, ಕುಡಿಯುವ ನೀರು ಹಾಗೂ ಕೈಗಾರಿಕಾ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.

ಕೃಷ್ಣಾ ಮೇಲ್ದಂಡೆ ಯೋಜನೆ, ಎತ್ತಿನಹೊಳೆ ಯೋಜನೆ, ಕೊಟ್ಟಲಗಿ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಸೇರಿದಂತೆ ಹಲವು ಯೋಜನೆಗಳಿಂದ ರೈತರಿಗೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

**ಕಾಂಗ್ರೆಸ್ ಸರ್ಕಾರದ ಪ್ರಮುಖ ಸಾಧನೆಗಳು**

- ಜಿಎಸ್‌ಡಿಪಿ ಬೆಳವಣಿಗೆಯಲ್ಲಿ ದೇಶದಲ್ಲೇ 1ನೇ ಸ್ಥಾನ
- 1.31 ಲಕ್ಷ ಕೋಟಿ ರೂ. ಗ್ಯಾರಂಟಿ ಯೋಜನೆಗಳಿಗೆ ವೆಚ್ಚ
- 10.27 ಲಕ್ಷ ಕೋಟಿ ರೂ. ಹೂಡಿಕೆ ಆಕರ್ಷಣೆ
- 6 ಲಕ್ಷ ಉದ್ಯೋಗ ಸೃಷ್ಟಿ ಗುರಿ
- 20 ಸಾವಿರ ಪೌರಕಾರ್ಮಿಕರ ಕಾಯಂಗೊಳಿಸುವಿಕೆ
- 4.5 ಕೋಟಿ ಜನರಿಗೆ ಗ್ಯಾರಂಟಿ ಯೋಜನೆಗಳ ಲಾಭ
- 17 ಡೆಂಗೀ, ಆರೋಗ್ಯ ಸೇವೆ, ಗೃಹ ಆರೋಗ್ಯ ಯೋಜನೆ ಜಾರಿ
- ರೈತರಿಗೆ ಸಾವಿರಾರು ಕೋಟಿ ರೂ. ಬೆಳೆ ಪರಿಹಾರ ಹಾಗೂ ನೀರಾವರಿ ಯೋಜನೆಗಳು

**ಕನ್ನಡಿಗರಿಗೆ ನುಡಿದಂತೆ ನಡೆದ ಸರ್ಕಾರ**

2023ರ ಚುನಾವಣೆಯಲ್ಲಿ ನೀಡಿದ 593 ಭರವಸೆಗಳಲ್ಲಿ 242 ಭರವಸೆಗಳನ್ನು ಈಡೇರಿಸಿ ಶೇ. 40ರಷ್ಟು ಗುರಿ ಸಾಧಿಸಲಾಗಿದೆ. ಅಭಿವೃದ್ಧಿ, ಉದ್ಯೋಗ ಹಾಗೂ ಸಾಮಾಜಿಕ ಭದ್ರತೆಯಲ್ಲಿ ಕರ್ನಾಟಕ ದೇಶಕ್ಕೆ ಮಾದರಿಯಾಗುತ್ತಿದೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

## ರೈತರಿಗೆ ಬೀಜ-ಗೊಬ್ಬರ ವಿತರಣೆ ಆರಂಭ



■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮಿನ ಬಿತ್ತನೆಗೆ ಸಕಾಲದಲ್ಲಿ ಸಿದ್ಧರಾಗಲು ಜಿಲ್ಲೆಯ ರೈತರಿಗೆ ಕೃಷಿ ಇಲಾಖೆಯಿಂದ ಬೀಜ ಹಾಗೂ ಗೊಬ್ಬರ ವಿತರಣೆ ಕಾರ್ಯಕ್ರಮಕ್ಕೆ ಕೃಷಿಕ ಸಮಾಜದ ಜಿಲ್ಲಾ ಉಪಾಧ್ಯಕ್ಷ ರಾಮಣ್ಣ ಹೂವಣ್ಣವರ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉತ್ತಮ ಗುಣಮಟ್ಟದ ಬೀಜ ಮತ್ತು ಗೊಬ್ಬರವನ್ನು ಸಮಯಕ್ಕೆ ಸರಿಯಾಗಿ ರೈತರಿಗೆ ತಲುಪಿಸುವುದು ಕೃಷಿ ಉತ್ಪಾದನೆ ಹೆಚ್ಚಿಸಲು ಸಹಕಾರಿಯಾಗಲಿದೆ ಎಂದರು.

ಮುಂಗಾರು ಹಂಗಾಮನ್ನು ಯಶಸ್ವಿಗೊಳಿಸಲು ರೈತರು ಕೃಷಿ ಇಲಾಖೆಯ ಮಾರ್ಗದರ್ಶನದಂತೆ ಬೆಳೆ ಆಯ್ಕೆ ಮತ್ತು ಬಿತ್ತನೆ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಯ್ಯ ಕೊರವನವರ, ಕೃಷಿ ಅಧಿಕಾರಿ ರಾಜೇಶ್ವರಿ ಸಜ್ಜನ, ರೈತ ಮುಖಂಡರಾದ ಆರ್.ಆರ್. ಕಾಶಪ್ಪನವರ, ಹುಚ್ಚಣ್ಣ ಶ್ಯಾಪೂರ, ಗದಗ ತಾಲೂಕು ಅಧ್ಯಕ್ಷ ಯಲ್ಲಪ್ಪ ಬಾಬರಿ, ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವೃದ್ಧರ ಸಮಸ್ಯೆಗಳಿಗೆ ಸಂಘಟಿತ ಹೋರಾಟ ಅಗತ್ಯ : ಚನ್ನಪ್ಪ ಕೋಲಕಾರ

## ಹಿರಿಯರ ಹಕ್ಕಿಗೆ ಧಕ್ಕೆ ಆದರೆ ಹೋರಾಟ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೆತ್ತ ಮಕ್ಕಳಿಂದಲೇ ಮನೆಗಳಲ್ಲಿ ನಿರ್ಲಕ್ಷ್ಯ ಹಾಗೂ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರಿಗೆ ನ್ಯಾಯ ಒದಗಿಸಲು ಸಂಘಟಿತ ಹೋರಾಟಕ್ಕೆ ಹಿರಿಯ ನಾಗರಿಕರ ಸಂಘ ಸಜ್ಜಾಗಬೇಕು ಎಂದು ತಾಲೂಕು ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಹಿರಿಯ ಸದಸ್ಯ ಚನ್ನಪ್ಪ ಕೋಲಕಾರ ಹೇಳಿದರು.



ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಮಿಲ್ ಆವರಣದಲ್ಲಿ ಸೋಮವಾರ ನಡೆದ ಸಂಘದ ಮಾಸಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ವಯೋವೃದ್ಧರ ಹಕ್ಕುಗಳ ರಕ್ಷಣೆಗೆ ಸಮಾಜ ಹೆಚ್ಚು ಸ್ಪಂದಿಸುವ ಅಗತ್ಯವಿದೆ ಎಂದರು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, 60 ವರ್ಷ ದಾಟಿದವರು ಆರೋಗ್ಯದ ಕಡೆ ವಿಶೇಷ ಗಮನ ಹರಿಸಬೇಕು. ಕುಟುಂಬದವರೊಂದಿಗೆ ಹೊಂದಾಣಿಕೆಯಿಂದ ಬದುಕಿ, ಮುಪ್ಪಿನ ದಿನಗಳನ್ನು ನೆಮ್ಮದಿ ಹಾಗೂ ಸಂತೋಷದಿಂದ ಕಳೆಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

> "ಹಿರಿಯ ನಾಗರಿಕರ ಬದುಕು ಗೌರವಯುತವಾಗಿರಲು ಸಮಾಜ ಮತ್ತು ಸರ್ಕಾರ ಎರಡೂ ಕೈಜೋಡಿಸಬೇಕು."
> –ಕೆ.ಎ. ಬಳಿಗೇರ

ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲೂಕು ಘಟಕದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಕಳೆದ ಮೂರು ತಿಂಗಳಿಂದ ಹಲವಾರು ಹಿರಿಯ ನಾಗರಿಕರಿಗೆ ಮಾಸಾಶನ ಬಂದಿಲ್ಲ. ಇದರಿಂದ ಜೀವನ ನಿರ್ವಹಣೆಯಲ್ಲಿ ಸಂಕಷ್ಟ ಎದುರಾಗಿದ್ದು, ಮಾಸಾಶನ ಸಿಗದವರು ಸಂಘದ ಕಾರ್ಯದರ್ಶಿಗಳ ಬಳಿ ಹೆಸರು ನೋಂದಾಯಿಸಿದರೆ ಸಂಬಂಧಿಸಿದ ಇಲಾಖೆಯೊಂದಿಗೆ ಸಂಪರ್ಕಿಸಿ ಸಮಸ್ಯೆ ಪರಿಹರಿಸಲಾಗುವುದು ಎಂದು ತಿಳಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಹಿರಿಯ ನಾಗರಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಸಂಘದ ಸದಸ್ಯರಿಗೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ಚಂಬಣ್ಣ ಬಾಳಿಕಾಯಿ, ಸಂಘದ ಮಹಿಳಾ ಘಟಕದ ಅಧ್ಯಕ್ಷೆ ಶಕುಂತಲಾ ಅಳಗವಾಡಿ ಹಾಗೂ ಚಂದ್ರಶೇಖರ ಸವದತ್ತಿ ಮಾತನಾಡಿದರು.

ಸಭೆಯಲ್ಲಿ ಐ.ಎಸ್. ಮಡಿವಾಳರ, ನಿಂಗಪ್ಪ ಜಾವೂರ, ಪಾರಕ್ಕ ಧರಣಿ, ಶಿವಣ್ಣ ಕುಮಸಿ, ಪವಾಡಶೆಟ್ಟರ, ಕೊತ್ತಲ ಮಹಾದೇವಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ದಿ. ವೈದ್ಯ ಬಾಬುರಾವ್ ಕುಲಕರ್ಣಿ ಸೇವೆಯ ಕೀರ್ತಿ ದೇಶಾದ್ಯಂತ : ಕೃಷ್ಣ ಕುಲಕರ್ಣಿ, ವಿ.ಜಿ. ಪಡಗೇರಿ

## ಅಸ್ತಮಾ ಸೇವಾಯಜ್ಞಕ್ಕೆ ಲಕ್ಷ್ಮೇಶ್ವರ ಸಜ್ಜು!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 59 ವರ್ಷಗಳಿಂದ ಅಸ್ತಮಾ ರೋಗಿಗಳಿಗೆ ಉಚಿತ ಮಂತ್ರೌಷಧಿ ವಿತರಿಸುವ ಮೂಲಕ ಲಕ್ಷ್ಮೇಶ್ವರದ ಹೆಸರನ್ನು ದೇಶದಾದ್ಯಂತ ಪರಿಚಯಿಸಿದ ದಿವಂಗತ ಡಾ. ವೈದ್ಯ ಬಾಬುರಾವ್ ಕುಲಕರ್ಣಿಯವರ ಸೇವೆ ಅಪಾರವಾಗಿದೆ ಎಂದು ಯುವ ಮುಖಂಡ ಕೃಷ್ಣ ಕುಲಕರ್ಣಿ (ತಂಗೋಡ) ಹಾಗೂ ಪುರಸಭೆ ಮಾಜಿ ಅಧ್ಯಕ್ಷ ವಿ.ಜಿ. ಪಡಗೇರಿ ಹೇಳಿದರು.



ಪಟ್ಟಣದಲ್ಲಿ ದಿ. ವೈದ್ಯ ಬಾಬುರಾವ್ ಕುಲಕರ್ಣಿಯವರ ನಿವಾಸದಲ್ಲಿ ನಡೆದ 60ನೇ ವರ್ಷದ ಉಚಿತ ಅಸ್ತಮಾ ಔಷಧಿ ವಿತರಣಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಹಿರಿಯರು ಹಾಕಿಕೊಟ್ಟ ಸೇವೆಯ ದಾರಿಯನ್ನು ಮುಂದುವರಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಈ ಬಾರಿ ಜೂನ್ 8ರಂದು ಸೋಮವಾರ ಸಂಜೆ 7.39ಕ್ಕೆ ಮೃಗಶಿರಾ ಮಳೆಯ ಪ್ರವೇಶಕಾಲದಲ್ಲಿ ಡಾ. ಹರೀಶ ಕುಲಕರ್ಣಿ ನೇತೃತ್ವದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆ ನಂ.1ರ ಆವರಣದಲ್ಲಿ 60ನೇ ವರ್ಷದ ಉಚಿತ ಅಸ್ತಮಾ ಯಜ್ಞ ನಡೆಯಲಿದೆ ಎಂದು ತಿಳಿಸಿದರು. ದೂರದೂರಿನಿಂದ ಆಗಮಿಸುವ ರೋಗಿಗಳಿಗೆ ಯಾವುದೇ ತೊಂದರೆ-ಯಾಗದಂತೆ ವ್ಯವಸ್ಥೆ ಕಲ್ಪಿಸಿ, ಸೇವಾಭಾವದಿಂದ ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿದೆ ಎಂದು ಕರೆ ನೀಡಿದರು.

ಗೋಪಾಲ ಪಡ್ನೀಸ್ ಹಾಗೂ ನಿಂಗಪ್ಪ ಬನ್ನಿ ಮಾತನಾಡಿ, ಇಂತಹ ಮಹತ್ವದ ಸೇವಾ ಕಾರ್ಯಕ್ಕೆ ಸಮಾಜದ ಸಹಕಾರ ಅತ್ಯಗತ್ಯ. ಕಳೆದ ಐದು ದಶಕಗಳಿಂದ ಲಕ್ಷ್ಮೇಶ್ವರದ ಜನರು ಕೈಜೋಡಿಸಿರುವುದರಿಂದ ಈ ಕಾರ್ಯಕ್ರಮ ದೊಡ್ಡ ಮಟ್ಟದಲ್ಲಿ ಬೆಳೆಯಲು ಸಾಧ್ಯವಾಗಿದೆ ಎಂದರು.

ರೋಗಿಗಳಿಗೆ ಕುಡಿಯುವ ನೀರು, ಔಷಧಿ ಹಾಗೂ ಪಥ್ಯದ ಆಹಾರ ವ್ಯವಸ್ಥೆಯನ್ನು ಶಿಸ್ತಿನಿಂದ ನಿರ್ವಹಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ಪಲ್ಲಣ್ಣನವರ ಕುಲಕರ್ಣಿ ವಹಿಸಿದ್ದರು. ಸಭೆಯಲ್ಲಿ ಡಾ. ಹರೀಶ ಕುಲಕರ್ಣಿ, ಪಾಪಣ್ಣ ಬನ್ನಿ, ಪುಟ್ಟಪ್ಪ ಕೋರಿ, ದ್ಯಾವಣ್ಣ ಕಲ್ಯಾಣ, ಮಲ್ಲಪ್ಪ ಬನ್ನಿ, ಶೇಖಪ್ಪ ಪೂಜಾರ, ಶಂಕ್ರಪ್ಪ ತಹಸೀಲ್ದಾರ, ಭರಮಪ್ಪ ಬನ್ನಿ, ನಿಂಗಪ್ಪ ಗೊರವರ, ಬಾಬಣ್ಣ ಖಂಡ್ರೆನವರ, ಅಡಿವೆಪ್ಪ ಮಾಮನಿ, ವೀರೇಶ ಮಾಮನಿ, ನಿಂಗಪ್ಪ ತಹಸೀಲ್ದಾರ, ಮಂಜುನಾಥ ಪೂಜಾರ, ಮಂಜಪ್ಪ ಗೊಜಗೊಜಿ, ಮಹಾದೇವಪ್ಪ ಮುಳಗುಂದ, ಹೊನಕೆರೆಪ್ಪ ಗವಿ, ದ್ಯಾಮಣ್ಣ ಕುಮಟೆ, ಮೈಲಾರಪ್ಪ ಪಡಗೇರಿ, ಬಸಪ್ಪ ಬನ್ನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದು ಸಲಹೆ-ಸೂಚನೆ ನೀಡಿದರು.

ದಿಗಂಬರ ಪೂಜಾರ ಕಾರ್ಯಕ್ರಮ ನಿರೂಪಿಸಿದರು.

### ಗಜೇಂದ್ರಗಡ-ರೋಣದಲ್ಲಿ ಬಾಡಿಗೆ ಕಟ್ಟಡಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿ ಆಹ್ವಾನ

## ವಸತಿ ನಿಲಯಗಳಿಗೆ ಕಟ್ಟಡ ಹುಡುಕಾಟ!

■ ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಡಾ. ಬಿ.ಆರ್. ಅಂಬೇಡ್ಕರ್ ವಸತಿ ನಿಲಯಗಳಿಗಾಗಿ ಗಜೇಂದ್ರಗಡ ಹಾಗೂ ರೋಣ ಭಾಗದಲ್ಲಿ ಬಾಡಿಗೆ ಆಧಾರದ ಮೇಲೆ ಕಟ್ಟಡ ಪೂರೈಸಲು ಕಟ್ಟಡ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಜೇಂದ್ರಗಡ ಪಟ್ಟಣ ಮಧ್ಯಭಾಗದಲ್ಲಿರುವ ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಸತಿ ನಿಲಯಕ್ಕೆ 100 ವಿದ್ಯಾರ್ಥಿಗಳ ಸಾಮರ್ಥ್ಯದ ಕಟ್ಟಡ ಅಗತ್ಯವಿದೆ. ಕನಿಷ್ಠ ಐದು ವಿಶಾಲ ವಾಸದ ಕೊಠಡಿಗಳು ಹಾಗೂ ಸುಮಾರು 50 ಟು-ಟೈಯರ್ ಕಾಟ್ ವ್ಯವಸ್ಥೆ ಇರಬೇಕು.

ರೋಣ ಪಟ್ಟಣದಲ್ಲಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ 65 ವಿದ್ಯಾರ್ಥಿನಿಯರ ಸಾಮರ್ಥ್ಯದ ಕಟ್ಟಡ ಹಾಗೂ ರೋಣ ತಾಲೂಕಿನ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ 50 ವಿದ್ಯಾರ್ಥಿಗಳ ಸಾಮರ್ಥ್ಯದ ಕಟ್ಟಡ ಬೇಕಿದೆ. ಬಾಲಕರ ನಿಲಯಕ್ಕೆ ಕನಿಷ್ಠ ಮೂರು ವಿಶಾಲ ಕೊಠಡಿಗಳು ಹಾಗೂ 25 ಟು-ಟೈಯರ್ ಕಾಟ್ ವ್ಯವಸ್ಥೆ ಕಡ್ಡಾಯವಾಗಿದೆ.

ಕಟ್ಟಡಗಳಲ್ಲಿ ಬೋರವೆಲ್ ಅಥವಾ ಕೊಳವೆಬಾವಿ ನೀರಿನ ಸೌಲಭ್ಯ, ಆರ್‌ಸಿಸಿ ನೀರಿನ ಸಂಪ್, ಶೌಚಾಲಯ ಮತ್ತು ಸ್ನಾನಗೃಹ, ಅಡುಗೆ ಕೋಣೆ, ಊಟದ ಹಾಲ್, ಗ್ರಂಥಾಲಯ, ಕಚೇರಿ ಕೊಠಡಿ, ರೇಷನ್ ರೂಮ್, ಆಟದ ಮೈದಾನ ಹಾಗೂ ಕಂಪೌಂಡ್ ಗೋಡೆ ಇರಬೇಕು. ಜೊತೆಗೆ ಸುರಕ್ಷಿತ ವಿದ್ಯುತ್ ಸಂಪರ್ಕ ಮತ್ತು ಸುಸಜ್ಜಿತ ವೈರಿಂಗ್ ವ್ಯವಸ್ಥೆಯೂ ಕಡ್ಡಾಯವಾಗಿದೆ.

ಕಟ್ಟಡದ ದಾಖಲೆಗಳು, ನಿರ್ಮಾಣ ವರ್ಷದ ಮಾಹಿತಿ ಹಾಗೂ ರೂ.100 ಮೌಲ್ಯದ ಮುಚ್ಚಳಿಕೆ ಪತ್ರದೊಂದಿಗೆ ಅರ್ಜಿ ಸಲ್ಲಿಸಬೇಕು. ತಾಲೂಕು ಮಟ್ಟದ ಸಮಿತಿಯಿಂದ ಪರಿಶೀಲನೆ ಮತ್ತು ಅನುಮೋದನೆಗೊಂಡ ಬಳಿಕ ಕಟ್ಟಡಗಳನ್ನು ಬಾಡಿಗೆಗೆ ಪಡೆಯಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ರೋಣ ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka